ವಿಜಯಪುರ | ಸಂಪುಟ 04 | ಸಂಚಿಕೆ 074 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ


ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಗುರುವಾರ, ಮೇ, 07, 2026



"ಕರ್ನಾಟಕದ ಎರಡು ಕ್ಷೇತ್ರಗಳ ಉಪಚುನಾವಣೆಯಲ್ಲಿ ಜನ ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ದಕ್ಷ ಆಡಳಿತ ನೀಡುತ್ತಿರುವುದನ್ನು ಗಮನಿಸಿದ್ದಾರೆ. 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಬೆಂಬಲ ನೀಡುವ ಸಂದೇಶ ನೀಡಿದ್ದಾರೆ".

■ ಡಿ.ಕೆ. ಶಿವಕುಮಾರ್
ಉಪ ಮುಖ್ಯಮಂತ್ರಿ

## ಬೀದಿ ನಾಯಿ ಹಾವಳಿ ತಡೆಗೆ ಅಧಿಕಾರಿಗಳಿಗೆ ಡಿಸಿ ಸೂಚನೆ

### ನಾಯಿ ಕಡಿತಕ್ಕೊಳಗಾದ ಬಾಲಕನನ್ನು ಭೇಟಿ ಮಾಡಿದ ಜಿಲ್ಲಾಧಿಕಾರಿ ಡಾ. ಆನಂದ ಕೆ.



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ ಸಂ 35ರ ಫೇವರಚಂದ ಕಾಲೊನಿಯ ರಾಜ–ಕುಮಾರ ಲೇಔಟ್ ನಲ್ಲಿ ನಾಯಿ ಕಡಿತಕ್ಕೊಳಗಾಗಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಗುವನ್ನು ಭೇಟಿ ಮಾಡಿ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಮಗುವಿನ ಆರೋಗ್ಯ ವಿಚಾರಿಸಿ, ಸೂಕ್ತ ಚಿಕಿತ್ಸೆ ನೀಡಲು ವೈದ್ಯರಿಗೆ ಸಲಹೆ ಮಾಡಿದರು.

ರಾಜಕುಮಾರ ಲೇಔಟ್ ನಿವಾಸಿಯಾಗಿರುವ 3 ವರ್ಷದ ವಿರಾಜ್ ಸಂತೋಷ ಬಿರಾದಾರ ಮಂಗಳವಾರ ನಾಯಿ ಕಡಿತಕ್ಕೊಳಗಾಗಿದ್ದರಿಂದ ಆತನನ್ನು ಪೋಷಕರು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಸುದ್ದಿ ತಿಳಿದ ಜಿಲ್ಲಾಧಿಕಾರಿಗಳು, ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ, ನಾಯಿ ಕಡಿತಕ್ಕೊಳಗಾದ ಮಗುವಿನ ಆರೋಗ್ಯ ವಿಚಾ–ರಿಸಿದ ಬಳಿಕ ಮಾತನಾಡಿದ ಅವರು, ಮಗು ಔಷಧಿಗೆ ಸ್ಪಂದಿಸುತ್ತಿದ್ದು, ಚೇತರಿಸಿಕೊಂಡು ಮಾತನಾಡುತ್ತಿದ್ದಾನೆ. ಹಾಗಾಗಿ ಪೋಷಕರ ಆತಂಕಕ್ಕೊಳಗಾಗಬೇಕಿಲ್ಲ ಎಂದರು.

> ಬೀದಿ ನಾಯಿ ಹಿಡಿಯಲು ಹಾಗೂ ಪುನರ್ ವ್ಯವಸ್ಥೆ ರಾಜಕುಮಾರ ಬಡಾವಣೆಯಲ್ಲಿ ಬೀದಿ ನಾಯಿಗಳ ಹಾವಳಿ ಅಧಿಕವಾಗಿದ್ದು, ನಾಯಿಗಳನ್ನು ಹಿಡಿದು ಪುನರ್ ವ್ಯವಸ್ಥೆ (ಡಾಗ್ ಶೆಲ್ಟರ್) ಪಾಲಿಕೆಯಿಂದ ವ್ಯವಸ್ಥೆ ಮಾಡಲಾಗುವುದು. ಈ ಕುರಿತು ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ಇದೇ ವೇಳೆ ತಿಳಿಸಿದರು.

ಜೊತೆಗೆ ಬಾಲಕನಿಗೆ ರೇಬೀಸ್ ವಿರೋಧಿ ಲಸಿಕೆಗಳನ್ನು ನೀಡಲಾಗುತ್ತದೆ. ಜಿಲ್ಲಾಸ್ಪತ್ರೆಯಿಂದಲೂ ಸೂಕ್ತ ಲಸಿಕೆಯನ್ನು ಪಡೆಯಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ಇದೇ ವೇಳೆ ತಿಳಿಸಿದರು.

ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದಿಂದ ಆಸ್ಪತ್ರೆಗೆ ಭೇಟಿ ನೀಡಿ ಸಮರ್ಪಕ ಸ್ಪಂದಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯ ರಾಜು ಕು–ರಿಯವರ, ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ ಸೇರಿದಂತೆ ಖಾಸಗಿ ಆಸ್ಪತ್ರೆ ವೈದ್ಯರು, ಸಿಬ್ಬಂದಿ ಹಾಗೂ ಪಾಲಿಕೆ ಸಿಬ್ಬಂದಿ ಉಪಸ್ಥಿತರಿದ್ದರು.

## ಸಾಮಾಜಿಕ ನ್ಯಾಯಕ್ಕೆ ನಮ್ಮ ಸರ್ಕಾರ ಬದ್ಧ : ಸಿಎಂ

### ಬಸವಣ್ಣನವರ ಸಾಮಾಜಿಕ ನ್ಯಾಯದಲ್ಲಿ ನನಗೆ ನಂಬಿಕೆ । ಸಂಪತ್ತು- ಆಡಳಿತ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು । ಸಿಎಂ ಸಿದ್ದರಾಮಯ್ಯ ಹೇಳಿಕೆ

ಮೈಸೂರು: ಆರ್ಥಿಕ ಹಾಗೂ ಸಾಮಾಜಿಕ ಶಕ್ತಿಗಾಗಿ ಶಿಕ್ಷಣ ಅಗತ್ಯವಾಗಿದ್ದು, ಭೋವಿ ಜನಾಂಗದವರು ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾಡಳಿತದಿಂದ ಆಯೋಜಿಸಿದ್ದ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ರಾಜ್ಯದಲ್ಲಿ ಸಮಸಮಾಜ ನಿರ್ಮಿಸುವ ಸಂಕಲ್ಪವನ್ನು ಸರ್ಕಾರ ಹೊಂದಿದೆ. ಉತ್ಪಾದಿಸಿದ ಸಂಪತ್ತು ಸಮಾನವಾಗಿ ಹಂಚಿಕೆಯಾಗಿಬೇಕು. ರಾಜ್ಯದ ಸರ್ವ–ರಿಗೂ ಸಮಪಾಲು, ಸಮಬಾಳು ಸಿಗಬೇಕೆಂಬುದೇ ಸರ್ಕಾರದ ಉದ್ದೇಶ ಎಂದರು.

ಸಿದ್ದರಾಮೇಶ್ವರರೂ ಸೇ–ರಿದಂತೆ ಸಂತಮಹಾಶಯರು, ಸಮಾಜದಲ್ಲಿ ಜಾತಿವರ್ಗಗಳ ವ್ಯವಸ್ಥೆಗಳು ತೊಲಗಬೇಕು ಎಂದು ಬಯಸಿದ್ದರು. ಬಸವಾದಿ ಶರಣರು 12 ನೇ ಶತಮಾನದಲ್ಲಿ ಸಮಾನತೆಯ ಸಿದ್ಧಾಂತವನ್ನು ಬೋಧಿಸಿದ್ದರು. ಶೋಷಣೆಗೊಳಗಾದ ಹಾಗೂ ಅವಕಾಶವಂಚಿತ ಸಮುದಾಯಗಳು ಸಂಘಟಿತರಾಗುವ ಸಮ್ಮೇಳನಗಳು ಉತ್ತಮ ಕಾರ್ಯಗಳಾಗಿವೆ ಎಂದು ತಿಳಿಸಿದರು.

ಬಸವಣ್ಣನವರು ಬೋಧಿಸಿದಂತೆ ಸಾಮಾಜಿಕ ನ್ಯಾಯದಲ್ಲಿ ನಾನು ನಂಬಿಕೆಯಿರಿಸಿದ್ದೇನೆ. ರಾಜಕೀಯ ಸ್ವಾತಂತ್ರ್ಯ ಆರ್ಥಿಕ ಹಾಗೂ ಸಾಮಾಜಿ–ಕ ಸ್ವಾತಂತ್ರ್ಯದ ತಳಹದಿಯ ಮೇಲೆ ನಿಂತಿದೆ. ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕ ಆರ್ಥಿಕ ಶಕ್ತಿ ದೊರಕಲು ಸಾಧ್ಯ ಎಂದು ಹೇಳಿದರು.

ನಮ್ಮ ಸರ್ಕಾರ ಭೋವಿ ನಿಗಮವೂ ಸೇರಿದಂತೆ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಗಳ ಸಾಲವನ್ನು ಮನ್ನಾ ಮಾಡಲಾಗಿದೆ. ಪರಿಶಿಷ್ಟ ಜಾತಿಯ ಸಮುದಾಯಗಳಲ್ಲಿನ ಅಸಮಾನತೆ ಹೋಗಲಾಡಿಸಲು ಐತಿಹಾಸಿಕ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ ಎಡಗೈಗೆ ಶೇ. 5.25, ಬಲಗೈಗೆ ಶೇ.5.25 ಹಾಗೂ ಇತರ ಉಪಜಾತಿಗಳಿಗೆ ಶೇ.4.5 ರಷ್ಟು ಹಂಚಿಕೆ ಮಾಡಲಾಗಿದೆ ಎಂದರು.



> **ಗ್ಯಾರಂಟಿ ಯೋಜನೆಗಳು ಮಹಿಳಾ ಸಮೂಹಕ್ಕೆ ವರದಾನ**
> ಗ್ಯಾರಂಟಿ ಯೋಜನೆಗಳು ಮಹಿಳಾ ಸಮೂಹಕ್ಕೆ ವರದಾನವಾಗಿವೆ. ಆರ್ಥಿಕವಾಗಿ ಶಕ್ತಿಯಿಲ್ಲದವರಿಗೆ ಗ್ಯಾರಂಟಿ ಯೋಜನೆಗಳನ್ನು ಸಮಾನವಾಗಿ ನೀಡಲಾಗಿದೆ. ಮಹಿಳೆಯರಿಗೆ ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಯನ್ನು ಯಾವುದೇ ತಾರತಮ್ಯವಿಲ್ಲದೇ ನೀಡಲಾಗುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.



> "ಸಹಿಷ್ಣುತೆಯನ್ನು ರೂಡಿಸಿಕೊಳ್ಳಬೇಕು: ಸ್ವಾತಂತ್ರ್ಯ ಸಮಾನತೆ ಮತ್ತು ಭ್ರಾತೃತ್ವ ಸಂವಿಧಾನದ ಮೂಲ ತತ್ವಗಳು. ಜಡತ್ವದಿಂದ ಕೂಡಿರುವ ಜಾತಿ ವ್ಯವಸ್ಥೆಯನ್ನು ಸುಧಾರಿಸಬೇಕಿದೆ. ಎಲ್ಲಾ ಜಾತಿಗಳನ್ನು ಪ್ರೀತಿಸಿ, ಅವರೂ ನಮ್ಮನ್ನು ಪ್ರೀತಿಸುವಂತೆ ಮಾಡಬೇಕು ಹಾಗೂ ಸಹಿಷ್ಣುತೆಯನ್ನು ರೂಡಿಸಿಕೊಳ್ಳಬೇಕು. ಉತ್ಪಾದನೆಯಲ್ಲಿ ಎಲ್ಲರೂ ಭಾಗವಹಿ ಉತ್ಪನ್ನವನ್ನು ಸಮಾನವಾಗಿ ಹಂಚಿಕೊಳ್ಳಬೇಕು ಎಂದು ಸಿದ್ಧರಾಮೇಶ್ವರರು ನಮಗೆ ಬೋಧಿಸಿದ್ದರು. ಅವರು ನಡೆದ ಹಾದಿಯಲ್ಲಿಯೇ ನಮ್ಮ ಸರ್ಕಾರವೂ ನಡೆಯುತ್ತಿದೆ."
>
> ■ ಸಿದ್ದರಾಮಯ್ಯ
> ಮುಖ್ಯಮಂತ್ರಿಗಳು

ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧ: ಈಗ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಜಾತಿ ಸಮೀಕ್ಷೆ ವರದಿ ಬಂದ ನಂತರ ಚರ್ಚೆ ಮಾಡೋಣ ಎಂದರು. ನಮ್ಮ ಸರ್ಕಾರ ಸಾಮಾಜಿ–ಕ ನ್ಯಾಯಕ್ಕೆ ಬದ್ಧವಾಗಿದೆ. ಯಾರಿಗೂ ಅನ್ಯಾಯವಾಗಬಾರದು, ನೂರಕ್ಕೆ ನೂರು ಅಲ್ಲದಿದ್ದರೂ 99% ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.

ಅವಕಾಶಗಳಿಂದ ಯಾರೂ ವಂಚಿತರಾಗಬಾರದು: ಸಮುದಾಯದವರು ಇಟ್ಟಿರುವ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಭರವಸೆ ನೀಡಿದ ಮುಖ್ಯಮಂತ್ರಿಗಳು ಸಮುದಾಯದವರಿಗೆ ಕುಲಪತಿ, ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

## ಭೀಮಾ ನದಿಗೆ 16 ಸಾವಿರ ಕ್ಯೂಸೆಕ್ ನೀರು

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನಲ್ಲಿ ಹರಿಯುವ ಭೀಮಾ ನದಿಗೆ ಹದಿನಾರು ಸಾವಿರ ಕ್ಯೂಸೆಕ್ ನೀರು ಹರಿಯಬಿಡಲಾಗಿದೆ ಎಂದು ಕಂದಾಯ ಉಪವಿಭಾಗಾಧಿಕಾರಿ ಚಿದಾನಂದ ಗುರುಮೂರ್ತಿ ತಿಳಿಸಿದ್ದಾರೆ.

ನೀರು ಇಂದು ಧೂಳಖೇಡ ವರೆಗೆ ಬಂದಿದ್ದು ಸಂಜೆಯ ವರೆಗೆ ಇಂಡಿ ತಾಲೂಕು ಪ್ರವೇಶಿಸುವ ಸಾಧ್ಯತೆ ಇದೆ. ಈ ನೀರು ಇಂಡಿ ಪಟ್ಟಣಕ್ಕೆ ಕುಡಿಯುವ ನೀರಿನ ಕುರಿತು ಮತ್ತು ನದಿ ದಂಡೆಯ ಪಾತ್ರದ ಹಳ್ಳಿಗಳಿಗೆ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಕುರಿತು ಉಪಯೋಗಿಸಲಾಗುವದು ಎಂದು ಗುರುಮೂರ್ತಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಅನುಷ್ಠಾನ: ಬಬಲೇಶ್ವರ ಕ್ಷೇತ್ರ ರಾಜ್ಯದಲ್ಲಿಯೇ ಮೊದಲು

### ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಲ್ಲಿ ಬಬಲೇಶ್ವರ ಮತಕ್ಷೇತ್ರ ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಬುಧವಾರ ತಿಕೋಟಾ ತಾಲೂಕಿನ ಮಲಕನದೇವರಹಟ್ಟಿ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ರೂ. 100 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಸ'ೋ ವ' ಂ ದ' ೀ ವ' ರ' ಹ' ಟ್ಟ –ಮಲಕನದೇವರಹಟ್ಟಿ ವರೆಗೆ ಮೂಲಸೌಕರ್ಯ ಅಭಿವೃದ್ಧಿ ಅನುದಾನದಲ್ಲಿ ಜಿಲ್ಲಾ ಮುಖ್ಯ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸರಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಎಲ್ಲ ಫಲಾನುಭವಿಗಳಿಗೆ ತಲುಪಿಸಲಾಗಿದೆ ಎಂದು ಅವರು ಹೇಳಿದರು.



ನೀರಾವರಿ ಮತ್ತು ಕೋಟಿ ವೃಕ್ಷ ಅಭಿಯಾನದ ಪರಿಣಾಮ ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಈ ಬಾರಿ ವಿಜಯಪುರ ಜಿಲ್ಲೆಯಲ್ಲಿ ಉಷ್ಣಾಂಶ 40 ಡಿ. ಸೆ. ದಾಟಿಲ್ಲ. ಮಲಕನದೇವರಹಟ್ಟಿ ಗ್ರಾಮದ ಎರಡು ಕೆರೆಗಳ ಕಾಮಗಾರಿ ಪೂರ್ಣಗೊಂಡಿದೆ. ಮುಂಬರುವ ದಿನಗಳಲ್ಲಿ ನೀರು ತುಂಬಿಸಲಾಗುವುದು. ಬಾಬಾನಗರ ಬಳಿ ಸುಮಾರು ಒಂದು ಟಿಎಂಸಿ ಸಾಮರ್ಥ–್ಯದ ಡ್ಯಾಂ ನಿರ್ಮಿಸಲಾಗುತ್ತಿದ್ದು, ಮೂರ್ನಾಲ್ಕು ತಿಂಗಳಲ್ಲಿ ಡಿಪಿಆರ್ ಮತ್ತು ಟೆಂಡರ್ ಪ್ರಕ್ರಿಯೆ ಮುಗಿಯಲಿದೆ. ಅದರ ನಂತರ ಡ್ಯಾಂ ಕಾಮಗಾರಿ ಪ್ರಾರಂಭವಾಗಿ ನಿಗದಿತ ಸಮಯದಲ್ಲಿ ಪೂರ್ಣವಾಗಲಿದೆ. ಇದರಿಂದ ಬೇಸಿಗೆಯಲ್ಲಿ ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ. ಈಗ ಭೂಮಿಪೂಜೆ ನೆರವೇರಿಲಾದ ರಸ್ತೆಯನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು. ಇಲ್ಲಿನ ಸಮುದಾಯ ಭವನಕ್ಕೆ ಅನುದಾನ ಒದಗಿಸಲಾಗುವುದು ಎಂದು ಸಚಿವರು ತಿಳಿಸಿದರು.

ಜಿ.ಪಂ.ಮಾಜಿ ಅಧ್ಯಕ್ಷ ಸೋಮನಾಥ ಬಾಗಲಕೋಟ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಈ ಭಾಗದಲ್ಲಿ ರಸ್ತೆ ಮತ್ತು ನೀರಾವರಿ ಅಭಿವೃದ್ಧಿಗೆ ಕ್ರಮ ಕೈಗೊಂಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ, ವಿದ್ಯಾಧರ ಶರಣಯ್ಯ ಹಿರೇಮಠ, ದಯಾನಂದ ಹಿರೇಮಠ, ಸಿದ್ದು ಗೌಡನವರ, ಜಗದೀಶ ವಳಸಂಗ, ಚನ್ನಪ್ಪ ದಯಗೊಂಡ, ರಮೇಶ

## ಅನ್ನದಾತ ಅತಂತ್ರ, ಬೆಳೆಹಾನಿ ಪರಿಹಾರ ಹೆಚ್ಚಳಕ್ಕೆ ಒತ್ತಾಯ

### ಹೆಚ್ ಡಿ ಕೋಟೆಯಲ್ಲಿ ಗಾಳಿ-ಮಳೆಗೆ ಬಾಳೆ ಗಿಡಗಳು ನೆಲಸಮ



■ ಉದಯರಶ್ಮಿ ದಿನಪತ್ರಿಕೆ

ಹೆಚ್ ಡಿ ಕೋಟೆ: ಕಳೆದ ಮೂರು–ನಾಲ್ಕು ದಿನಗಳಿಂದ ಆಗಾಗ್ಗೆ, ಅಲ್ಲಲ್ಲಿ ಸುರಿಯುತ್ತಿರುವ ಮಳೆಗೆ ಕೆಲ ರೈತರ ಬದುಕು ಅತಂತ್ರವಾಗಿದೆ. ಕಟಾವಿಗೆ ಬಂದಿದ್ದ ಬೆಳೆಗಳನ್ನು ಕಳೆದುಕೊಂಡು ಕಂಗಾಲಾಗಿದ್ದಾರೆ. ತಾಲೂಕಿನ ತುಂಬಸೋಗೆ ಸಮೀಪವಿರುವ ನಿಲುವಾಗಿಲು ಗ್ರಾಮದ ಕಾಂತನಾಯಕ ಅವರ ಜಮೀನಿನಲ್ಲಿ ಬೆಳೆದಿದ್ದ ಬಾಳೆ ಬೆಳೆ ಸಂಪೂರ್ಣ ನೆಲಕಚ್ಚಿದೆ. ಬಿರುಗಾಳಿ ಸಹಿತ ಮಳೆಗೆ ನಾಲ್ಕು ಎಕರೆ ಜಮೀನಿನಲ್ಲಿ ಬೆಳೆದಿದ್ದ ಬಾಳೆ ಸಂಪೂರ್ಣ ನೆಲಸಮವಾಗಿದೆ. ಇನ್ನು 15–20 ದಿನದಲ್ಲಿ ಬಾಳೆ ಬೆಳೆ ಕಟಾವಿಗೆ ಬಂದಿತ್ತು. ವ್ಯಾಪಾರಸ್ಥರು ಕೂಡ ಬಾಳೆ ಗೊನೆ ನೋಡಿ, ಕೆಲವೇ ದಿನಗಳಲ್ಲಿ ಬಂದು ಕಟಾವು ಮಾಡುವುದಾಗಿ ಹೇಳಿ ಹೋಗಿದ್ದರು. ಆದರೆ ಅಷ್ಟರೊಳಗೆ ಬಿರುಗಾಳಿ ಸಹಿತ ಮಳೆಗೆ ಬಾಳೆ ಗಿಡಗಳು ನೆಲಸಮವಾಗಿವೆ. ಸಾಲಸೋಲ ಮಾಡಿ ಬಾಳೆ ಬೆಳೆದಿದ್ದೀವಿ. 15 ದಿನದೊಳಗೆ ಕಟಾವು ಮಾಡಿಸಿ, ಅಲ್ಪಸ್ವಲ್ಪ ದುಡ್ಡು ನೋಡುವ ಆಸೆ ಇತ್ತು. ಆದರೆ ಇದೀಗ ನಮ್ಮ ಆಸೆಗೆ ಮಳೆರಾಯ ತಣ್ಣೀರು ಎರಚಿದ್ದಾನೆ. ಬಾಳೆ ಕಳೆದುಕೊಂಡ ನಮಗೆ ದಿಕ್ಕೇ ತೋಚದಾಗಿದೆ. ಜೀವನ ಹೇಗೆ ನಡೆಸಬೇಕು ಎಂಬುದೇ ಗೊತ್ತಾಗುತ್ತಿಲ್ಲ. ಎರಡೂವರೆ ಎಕರೆ ಬೆಳೆ ಹಾನಿಗೆ ಕೇವಲ 17 ಸಾವಿರ ರೂಪಾಯಿ ಪರಿಹಾರ ಸರ್ಕಾರದಿಂದ ಬರುತ್ತೆ ಎಂದು ಹೇಳುತ್ತಿದ್ದಾರೆ. ಆ ಬಿಡುಗಾಸು ಹಣ ತೆಗೆದುಕೊಂಡು ಏನು ಮಾಡಬೇಕೆಂದು ಗೊತ್ತಾಗುತ್ತಿಲ್ಲ ಎಂದು ಜಮೀನು ಮಾಲೀಕ ಕಾಂತನಾಯಕ ಅಳಲು ತೋಡಿಕೊಳ್ಳುತ್ತಾರೆ.

ನಿಲುವಾಗಿಲು ಗ್ರಾಮದ ಮತ್ತೊಬ್ಬ ರೈತ ವೆಂಕಟೇಶ್ ಅವರ ಜಮೀನಿನಲ್ಲಿ ಬೆಳೆದಿದ್ದ 3 ಎಕರೆ ಬಾಳೆ ಬೆಳೆ ಕೂಡ ಸಂಪೂರ್ಣ ನೆಲಕಚ್ಚಿದೆ. ಗಾಳಿ–ಮಳೆಗೆ ಬಾಳೆಗಿಡಗಳು ನೆಲಕ್ಕುರುಳಿವೆ. ಇದ–ರಿಂದ ರೈತ ವೆಂಕಟೇಶ್ ಗೆ ದಿಕ್ಕೇ ತೋಚದಾಗಿದೆ. ಎಕರೆಗೆ 50 ಲಕ್ಷ ರೂಪಾಯಿ ಖರ್ಚು ಮಾಡಿ ಬಾಳೆ ಬೆಳೆದಿದ್ದೆ. ಇನ್ನು ಎರಡು ತಿಂಗಳಲ್ಲಿ ಬಾಳೆ ಗೊನೆ ಕಟಾವಿಗೆ ಬರುತ್ತಿತ್ತು. ಅಷ್ಟರೊಳಗೆ ಮಳೆ ಬಂದು ಈ ಪರಿಸ್ಥಿತಿ ನಿರ್ಮಾಣವಾಗಿದೆ. ಕೇವಲ ಬಾಳೆ ಕಂದು ಹಾಕುವುದಕ್ಕೆ ಎಕರೆಗೆ 4–5 ಸಾವಿರ ರೂಪಾಯಿ ಖರ್ಚು ಆಗುತ್ತದೆ. ಅಂತದ್ರಲ್ಲಿ ಎಕರೆಗೆ 6 ಸಾವಿರ ರೂಪಾಯಿ ಪರಿಹಾರ ಹಣ ತೆಗೆದುಕೊಂಡು ಏನು ಮಾಡಲಿ ಎಂದು ಕಣ್ಣೀರು ಹಾಕುತ್ತಾರೆ.

ತಾಲೂಕಿನ ಹ್ಯಾಂಡ್ ಪೋಸ್ಟ್ ಸಮೀಪವಿರುವ ಚೆನ್ನೇಗೌಡನಹುಂಡಿ ಗ್ರಾಮದಲ್ಲೂ ಬೆಳೆಹಾನಿಯಾಗಿದೆ. ಎರಡೂವರೆ ಎಕರೆ ಜಮೀನಿನಲ್ಲಿ ಬೆಳೆದಿದ್ದ ಬಾಳೆ ನಾಶವಾಗಿದ್ದು, ರೈತ ಪ್ರಕಾಶ್ ಗೆ ದಿಕ್ಕತೋಚದಾಗಿದೆ. ದಯವಿಟ್ಟು ಸರ್ಕಾರ ಅನ್ನದಾತರ ನೆರವಿಗೆ ಬರಬೇಕು. ಪರಿಹಾರ ಹ್ ಅನಾ ಹೆಚ್ಚಳ ಮಾಡಬೇಕೆಂದು ಸರ್ಕಾರಕ್ಕೆ ಒತ್ತಾಯ ಮಾಡುತ್ತಾರೆ.

## ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆಏರಿಕೆ ಖಂಡಿಸಿ ಆಪ್ ಮನವಿ

### ವಾಣಿಜ್ಯ ಗ್ಯಾಸ್ ಸಿಲಿಂಡರ್ & ಆಟೋ ಎಲ್‌ಪಿಜಿ ದರ ಏರಿಕೆ। ಬಡ ಜನರ ಮೇಲೆ ಕೇಂದ್ರ ಸರ್ಕಾರ ಚಾಟಿ ಏಟು । ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೇಂದ್ರ ಸರ್ಕಾರವು ವಾಣಿಜ್ಯ ಗ್ಯಾಸ್ ಸಿಲಿಂಡರ್ ಹಾಗೂ ಆಟೋ ಎಲ್‌ಪಿಜಿ ದರಗಳನ್ನು ನಿರಂತರವಾಗಿ ಹೆಚ್ಚಿಸುತ್ತಿರುವ ಕ್ರಮವನ್ನು ಆಮ್ ಆದ್ಮಿ ಪಾರ್ಟಿ ವಿಜಯಪುರ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸಿದೆ.

ಮಾಧ್ಯಮದವರೊಂದಿಗೆ ಮಾತನಾಡಿದ ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ "ಈ ಅನ್ಯಾಯಕರ ದರ ಏರಿಕೆ ಪಂಚ್ ರಾಜ್ಯಗಳ ಚುನಾವಣೆ ಮುಗಿದ ಮರುದಿನವೇ ಕೇಂದ್ರ ಸರ್ಕಾರ ಬಡ ಜನರ ಮೇಲೆ ಚಾಟಿ ಏಟು ಬೀಸಿದೆ. ಸಾಮಾನ್ಯ ಜನರ ಬದುಕಿನ ಮೇಲೆ ಭಾರೀ ಹೊರೆ ಹಾಕಿದ್ದು, ಸಣ್ಣ ವ್ಯಾಪಾರಿಗಳು, ಹೋಟೆಲ್ ಉದ್ಯಮಿಗಳು ಹಾಗೂ ಆಟೋ ಚಾಲಕರನ್ನು ಸಂಕಷ್ಟದ ಅಂಚಿಗೆ ತಳ್ಳಿದೆ" ಎಂದು ಹೇಳಿದರು.

"ಈಗಾಗಲೇ ದುಬಾರಿ ಬದುಕಿನ ಹೊರೆ ಹೊತ್ತಿರುವ ಜನರಿಗೆ ಈ ದರ ಏರಿಕೆ ಮತ್ತಷ್ಟು ಸಂಕಷ್ಟ ತಂದೊಡ್ಡಿದೆ. ಆಟೋ ಚಾಲಕರು ದಿನನಿತ್ಯದ ಆದ–ಾಯದಿಂದಲೇ ಜೀವನ ಸಾಗಿಸುವ ಪರಿಸ್ಥಿತಿಯಲ್ಲಿ ಇಂತಹ ದರ ಏರಿಕೆ ಅವರ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ" ಎಂದು ಭೋಗೇಶ್ ಸೋಲಾಪುರ್ ಆಕ್ರೋಶ ವ್ಯಕ್ತಪಡಿಸಿದರು.

"ಹೋಟೆಲ್ ಮತ್ತು ಸಣ್ಣ ಉದ್ಯಮಗಳು ನಷ್ಟದ ದಾ–ರಿಯಲ್ಲಿ ಸಾಗುತ್ತಿದ್ದು, ಉದ್ಯೋಗ ಕಳೆದುಕೊಳ್ಳುವ ಭೀತಿ ಹೆಚ್ಚುತ್ತಿದೆ" ಎಂದು ಕಳವಳ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ, ಆಮ್ ಆದ್ಮಿ ಪಾರ್ಟಿ ವಿಜಯಪುರ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಮಾಧ್ಯಮ ಉಸ್ತುವಾರಿ ಸಂಜು ಶೆಟಗಾರ, ಯುವ ಮುಖಂಡರಾದ ಪ್ರಕಾಶ್ ಸಬರದ, ಕಿರಣ್ ಮೇಲಿನಕೇರಿ, ಮಹಿಳಾ ಮುಖಂಡರಾದ ಸುಶೀಲಾ ಮಿಣಜಗಿ, ಜ್ಯೋತಿ ಮಿಣಜಗಿ ಉಪಸ್ಥಿತರಿದ್ದರು.




> **ಆಮ್ ಆದ್ಮಿ ಪಕ್ಷದ ಮುಖ್ಯ ಬೇಡಿಕೆಗಳು**
> * ವಾಣಿಜ್ಯ ಗ್ಯಾಸ್ ಸಿಲಿಂಡರ್ ದರವನ್ನು ತಕ್ಷಣ ಕಡಿಮೆ ಮಾಡಬೇಕು.
> * ಆಟೋ ಎಲ್‌ಪಿಜಿ ದರವನ್ನು ಹಿಂಪಡೆಯಬೇಕು.
> * ಸಣ್ಣ ವ್ಯಾಪಾರಿಗಳು ಮತ್ತು ಆಟೋ ಚಾಲಕರಿಗೆ ವಿಶೇಷ ಸಬ್ಸಿಡಿ ನೀಡಬೇಕು.
> * ಇಂಧನ ದರ ನಿಯಂತ್ರಣಕ್ಕೆ ಸ್ಪಷ್ಟ ನೀತಿ ಜಾರಿಗೊಳಿಸಬೇಕು.

# ಶೂನ್ಯದಿಂದ ಶಿಖರದೆತ್ತರಕ್ಕೆ ಏರಬೇಕೆ?

**ಜಯ್ ನುಡಿ**

**(ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)**

■ ಉದಯರಶ್ಮಿ ದಿನಪತ್ರಿಕೆ

ಹುಟ್ಟು ನಮ್ಮ ಕೈಯಲ್ಲಿಲ್ಲ. ಆದ್ದರಿಂದಲೇ ಕೆಲವರು ಬೆಳ್ಳಿಯ ಚಮಚ ಬಾಯಲ್ಲಿಟ್ಟುಕೊಂಡು ಹುಟ್ಟಿದರೆ, ಇನ್ನು ಕೆಲವರು ಕಿತ್ತು ತಿನ್ನುವ ಬಡತನದಲ್ಲಿ ಹುಟ್ಟುತ್ತಾರೆ. ಅಂಥವರು ಕನಿಷ್ಠ ಅಗತ್ಯಗಳಿಗೂ ದಿನನಿತ್ಯ ಹೋರಾಡಬೇಕಾಗುತ್ತದೆ. ಈ ಸಂಗತಿ ನಮ್ಮ ಸುತ್ತಲಿನ ಸಮಾಜ ನೋಡಿದಾಗ ಅನುಭವಕ್ಕೆ ಬಂದೇ ಬರುತ್ತದೆ. ಹುಟ್ಟು ಸಾವುಗಳ ನಡುವಿನ ಜೀವನ ಮಾತ್ರ ನಮ್ಮ ಕೈಯಲ್ಲಿದೆ ಎಂಬುದನ್ನು ಬಹುತೇಕರು ಮರೆತು ನಡೆಯುತ್ತಾರೆ. ವಿಚಿತ್ರವೆಂದರೆ ಇತಿಹಾಸ ಸೃಷ್ಟಿಸಿದ ಅನೇಕರು ಹುಟ್ಟಿದ್ದು ಬೆಳೆದದ್ದು ಏನೂ ಇಲ್ಲದ ಪರಿಸ್ಥಿತಿಯಲ್ಲಿ ಇಲ್ಲವೇ ಸಾಮಾನ್ಯವೆನಿಸುವ ಕುಟುಂಬದಲ್ಲಿ. ಇಲ್ಲಿ ಕಷ್ಟಗಳು ಕತ್ತಲೆಯಂತೆ ಕತ್ತಲೆಯನ್ನು ಎದೆಗಾರಿಕೆಯಿಂದ ಎದುರಿಸಿದ ಮೇಲೆ ಬಾಲ ನೇಸರನ ಹೊಂಬಣ್ಣದ ಸುಖದ ಹಗಲು ಎದುರು



ಆಗಲೇಬೇಕು. ಏನೂ ಇಲ್ಲದ ಸ್ಥಿತಿಯಿಂದ ಆರಂಭಿಸಿ, ಸಾಧನೆಯ ಹಾದಿಯಲ್ಲಿರುವ ಕಲ್ಲು ಮುಳ್ಳುಗಳಂತಿರುವ ಕಷ್ಟಗಳನ್ನು ಮೆಟ್ಟಿ ನಿಂತು ವಿಜಯದ ಶಿಖರವನ್ನು ತಲುಪಿದ ಎಷ್ಟೋ ಮಹನೀಯರ ಕಥೆಗಳು ನಮಗೆ ಸ್ಪೂರ್ತಿಯಾಗಿ ನಿಲ್ಲುತ್ತವೆ.

ಹಾಗಾದರೆ ಕಷ್ಟಗಳ ನಡುವೆಯೂ ಗೆಲುವಿನ ಶಿಖರವೇರಲು ಶೂನ್ಯದಿಂದ ಶಿಖರದೆತ್ತರಕ್ಕೇರಲು ಮಾಡಬೇಕಾದುದೇನು ತಿಳಿಯೋಣ ಬನ್ನಿ.

**ಅವಕಾಶಗಳು**

ಜೀವನದಲ್ಲಿ ಉನ್ನತ ಮಟ್ಟಕ್ಕೆ ಏರಲು ಮತ್ತು ಯಾವುದೇ ಸಾಧನೆ ಮಾಡಲು ಅವಕಾಶಗಳು ಮಹಾದ್ವಾರಗಳಂತೆ ಕೆಲಸ ಮಾಡುತ್ತವೆ. ಪ್ರತಿಯೊಂದು ಅವಕಾಶವೂ ಹೊಸ ಸವಾಲುಗಳನ್ನು ತರುತ್ತದೆ ಎಂಬುದನ್ನು ತಿಳಿದುಕೊಂಡು ಅವುಗಳ ಸದುಪಯೋಗ ಮಾಡಿಕೊಳ್ಳಬೇಕು. 'ಅವಕಾಶಗಳು ಬಾಗಿಲು ಬಡಿಯುತ್ತವೆ.' ಎನ್ನುವುದು ಹಳೆಯ ಮಾತು. ಇಂದು ನಾವೇ ಮುನ್ನುಗ್ಗಿ ಹೊಸ ಅವಕಾಶಗಳನ್ನು ಹುಡುಕಿಕೊಳ್ಳಬೇಕು. ಅವಕಾಶಗಳನ್ನು ತಟ್ಟೆಯಲ್ಲಿಟ್ಟು ನೀಡಲಾಗುವುದಿಲ್ಲ. ಅವು ಎಲ್ಲರಿಗೂ ಸಮಾನವಾಗಿ ಸಿಗುವುದೂ ಇಲ್ಲ. ಅವುಗಳು 'ಕಷ್ಟವೆಂಬ ಮಾರುವೇಷದ ರ‍್ಯಾಪರ್ ಸುತ್ತಿಕೊಂಡು ಬರುತ್ತವೆ. ಕೇವಲ ಮೇಲಿನ ರ‍್ಯಾಪರ್ ನೋಡಿ ಬಿಟ್ಟರೆ ಅದರೊಳಗಿರುವ ಗೆಲುವಿನ ಸಿಹಿಯನ್ನು ಕಳೆದುಕೊಳ್ಳುತ್ತೇವೆ' ಸಿಕ್ಕ ಅವಕಾಶಗಳನ್ನು ಸರಿಯಾಗಿ ಉಪಯೋಗಿಸಿಕೊಂಡರೆ ಆತ್ಮವಿಶ್ವಾಸವೂ ಹೆಚ್ಚಾಗುತ್ತದೆ. ಅವಕಾಶಗಳು ಯಾವಾಗ ಬರುತ್ತವೆ ಎಂಬುದನ್ನು ಹೇಳಲು ಬರುವುದಿಲ್ಲ. ಆದರೆ ಅವು ಬಂದಾಗ ಬಳಸಿಕೊಳ್ಳಲು ನಾವು ಯಾವಾಗಲೂ ಸಿದ್ಧರಾಗಿರಬೇಕು. ಆಗ ಸಿಗುವ ಸಣ್ಣ ಪುಟ್ಟ ಅವಕಾಶಗಳನ್ನು ಯಶಸ್ಸನ್ನಾಗಿ ಪರಿವರ್ತಿಸಲು ಸಹಕಾರಿಯಾಗಿತ್ತದೆ.

**ಸೋಲು**


ಯಶಸ್ವಿ ವ್ಯಕ್ತಿಗಳು ಬಿದ್ದಾಗೊಮ್ಮೆ ತಮ್ಮಲ್ಲಿರುವ ಎಲ್ಲಾ ಶಕ್ತಿಯನ್ನು ಹಾಕಿ ಎದ್ದು ನಿಲ್ಲಲು ಯತ್ನಿಸುತ್ತಾರೆ. ಸೋಲಿಗೆ ಭಯಪಡುವುದೇ ಇಲ್ಲ. ಕುಗ್ಗುವುದೂ ಇಲ್ಲ. ನೂರಾರು ಬಾರಿ ಸೋಲನ್ನು ಅನುಭವಿಸಿದರೂ ಸೋಲಿನ ಬಗ್ಗೆ ಚಿಂತಿಸುವುದೇ ಇಲ್ಲ. ಸೋಲಿಗೆ ಹೆದರದೆ ಮತ್ತೆ ಮತ್ತೆ ಪ್ರಯತ್ನಿಸುವ ಛಲ ತೋರುತ್ತಾರೆ. ಅವುಗಳನ್ನೇ ಗೆಲುವಿನ ಮೆಟ್ಟಿಲಾಗಿಸುವ ಜಾಣ್ಮೆಯನ್ನೂ ಮೆರೆಯುತ್ತಾರೆ. ಸೋಲೆಂಬುದು ಜೀವನದ ಅಂತ್ಯವಲ್ಲ. ಅದೊಂದು ಹೊಸ ಗೆಲುವಿನ ಆರಂಭ. ಎಂಬ ಸಂಗತಿಯನ್ನು ಮನಗಂಡು ಸೋಲಿನಿಂದ ಅನುಭವದ ಪಾಠಗಳನ್ನು ಕಲಿಯಬೇಕು. ನೀವು ಮಾಡಿದ ತಪ್ಪುಗಳು ಯಾವವು ಅವುಗಳನ್ನು ಹೇಗೆ ತಿದ್ದಿಕೊಳ್ಳಬೇಕೆಂಬ ಅರಿವು ಮೂಡುತ್ತದೆ. 'ಗೆದ್ದಾಗ ಬೀಗಬೇಡಿ ಸೋತಾಗ ಕುಗ್ಗಬೇಡಿ.' ಎಂಬ ನಾಣ್ಣುಡಿಯಂತೆ ಸೋಲನ್ನು ಸಕಾರಾತ್ಮಕವಾಗಿ ಸ್ವೀಕರಿಸಿ ಮುನ್ನಡೆಯಬೇಕು.

**ಕಷ್ಟಗಳು**

ಪ್ರಪಂಚದಲ್ಲಿ ಕೇವಲ ಹಗಲು ಇಲ್ಲವೇ ಕೇವಲ ರಾತ್ರಿಯಿರುವುದಿಲ್ಲ ಅಲ್ಲವೇ? ಅದೇ ರೀತಿ ಬದುಕಿನಲ್ಲಿ ಕೇವಲ ಕಷ್ಟ ಇಲ್ಲವೇ ಕೇವಲ ಸುಖ ಇರುವುದಿಲ್ಲ. ಹಗಲು ಕಳೆದ ಮೇಲೆ ರಾತ್ರಿ ಬರುತ್ತದೆ. ಕತ್ತಲೆ ಎಂದು ಅಳುತ್ತ ಕೂರುವ ಹಾಗಿಲ್ಲ ಏಕೆಂದರೆ ಕತ್ತಲೆಯ ಹಿಂದೆ ಹಗಲು ಬಂದೇ ಬರುತ್ತದೆ. ಹಾಗೆಯೇ ಬದುಕು ಕೇವಲ ಸುಖದ ಸಾಗರವಲ್ಲ. ಕಷ್ಟಗಳನ್ನು ಎದುರಿಸುವುದರಿಂದ ತಾಳ್ಮೆ ಸಹನೆ ಧೈರ್ಯ ಹೆಚ್ಚಾಗುತ್ತದೆ. ಅಷ್ಟೇ ಅಲ್ಲದೇ ಮಾನಸಿಕವಾಗಿ ಬಲಿಷ್ಠಗೊಳಿಸುತ್ತದೆ. ಒಂದು ದಾರಿ ಮುಚ್ಚಿದಾಗ ಮತ್ತೊಂದು ದಾರಿಯನ್ನು ಹುಡುಕಲು ಪ್ರೇರೇಪಿಸುತ್ತದೆ. ಸೃಜನಶೀಲತೆಯನ್ನು ಹೆಚ್ಚಿಸತ್ತದೆ. ಕಷ್ಟಗಳನ್ನು ಅಡಚಣೆಗಳೆಂದು ಗೋಳಾಡದೇ ಇಷ್ಟಪಟ್ಟು ಕಷ್ಟಗಳನ್ನು ಎದುರಿಸಬೇಕು. ಆಗ ಸಿಗುವ ಸಂತೋಷ ಅಪಾರವಾದದ್ದು.

**ಸಮಯ**

'ಸಮಯ ಮತ್ತು ಸಮಯದ ಅಲೆಗಳು ಯಾರಿಗಾಗಿಯೂ



ಕಾಯುವುದಿಲ್ಲ.' ಕಾಲ ಮಿಂಚಿ ಹೋದ ಮೇಲೆ ಕಣ್ಣೀರು ಇಟ್ಟರೆ ಪ್ರಯೋಜನವಿಲ್ಲ. ಸಮಯವನ್ನು ಸರಿಯಾಗಿ ಬಳಸಿಕೊಳ್ಳಬೇಕು ಅಂದರೆ ಸಿಕ್ಕ ಅವಕಾಶಗಳನ್ನು ತಕ್ಷಣವೇ ಗುರುತಿಸಿ ಬಳಸಿಕೊಳ್ಳಬೇಕು. ವ್ಯರ್ಥ ಮಾಡಿದ ಸಮಯ ವಿಷಾದವನ್ನು ಮಾತ್ರ ಉಳಿಸುತ್ತದೆ. ಕೆಲಸವನ್ನು ಸರಿಯಾದ ಸಮಯಕ್ಕೆ ಸರಿಯಾಗಿ ಮಾಡುವುದರಿಂದ



ಕೊನೆಯ ಕ್ಷಣದ ಆತಂಕ ಮತ್ತು ಒತ್ತಡ ನಿವಾರಣೆಯಾಗುತ್ತದೆ. ಆದ್ದರಿಂದ ಅಂದುಕೊಂಡ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಬೇಕು. ಮೊಬೈಲ್ ಸಾಮಾಜಿಕ ಜಾಲತಾಣಗಳಲ್ಲಿ ಅನಗತ್ಯವಾಗಿ ಕಳೆಯುವ ಸಮಯವನ್ನು ಕಡಿತಗೊಳಿಸಬೇಕು. ಇಂದು ಮಾಡಬೇಕಾದ ಕೆಲಸ ಈಗಲೇ ಮಾಡಿ ನಾಳೆಗೆ ತಳ್ಳಬೇಡಿ.




**ಭಯವಿಲ್ಲದ ಸ್ಥಿತಿ**

ಏನೂ ಇಲ್ಲದ ಪರಿಸ್ಥಿತಿ ಎಂದರೆ ಕನಿಷ್ಠ ಸೌಲಭ್ಯಗಳು ಲಭ್ಯವಿಲ್ಲದ ಸ್ಥಿತಿ. ಏನೂ ಇಲ್ಲ ಎಂದರೆ ಏನನ್ನೂ ಕಳೆದುಕೊಳ್ಳುವ ಭಯವೂ ಇಲ್ಲದ ಸ್ಥಿತಿ. ಏನೂ ಇಲ್ಲದ ಹಂತದಿಂದ ಶುರುವಾಗುವ ಪ್ರತಿ ಹೆಜ್ಜೆಯೂ ಬದುಕಿನ ಹೊಸ ಹೊಸ ಪಾಠಗಳನ್ನು ಕಲಿಸುತ್ತಲೇ ಹೋಗುತ್ತದೆ. ಅಂದರೆ ಆ ಹೆಜ್ಜೆಗಳು ಬಹುತೇಕ ಲಾಭವನ್ನೇ ತರುತ್ತವೆ. ಆದರೆ ಇಲ್ಲಿ ನಾವು ಗಮನಿಸಬೇಕಾದ ಸಂಗತಿಯೆಂದರೆ ಬಡತನವೆಂಬುದು ಒಂದು ಶಾಪ ಎಂದು ಭಯದಿಂದ ಅಳುತ್ತ ಕುಳಿತುಕೊಳ್ಳುವುದನ್ನು ಬಿಟ್ಟವರು, ಬಡತನವನ್ನು ಅಪಹಾಸ್ಯವೆಂದು ತಿಳಿಯದವರು, ಬಡತನವನ್ನೇ ವರವಾಗಿಸಿಕೊಂಡು,ನಿರ್ಭೀತಿಯಿಂದ ತಮ್ಮಲ್ಲಿರುವ ಸಾಮರ್ಥ್ಯವನ್ನು ಅರಿತು, ಜಗತ್ತಿಗೆ ಏನ್ನಾದರೂ ಸಾಧಿಸಿ ತೋರಿಸಬೇಕೆಂಬ ಛಲವನ್ನು ಹೊಂದಿದರು. ಇತಿಹಾಸ ಸೃಷ್ಟಿಸಿದರು. ಇತಿಹಾಸದ ಪುಟಗಳಲ್ಲಿ ಜಾಗ ಪಡೆದರು. ಅಂತೆಯೇ ನಾವು ಭಯವಿಲ್ಲದ ಸ್ಥಿತಿಯನ್ನು ಆತ್ಮವಿಶ್ವಾಸದಿಂದ ರೂಪಿಸಿಕೊಳ್ಳಬೇಕು.

**ಹೊಸ ದಾರಿ**

ಕವಿ ಗೋಪಾಲ ಕೃಷ್ಣ ಅಡಿಗರ ಕವಿತೆಯ ನುಡಿಯಂತೆ 'ಹೊಸ ಹಾದಿಯನು ಹಿಡಿದು ನಡೆಯಣ್ಣ ಮುಂದೆ ಹೊಸ ಜೀವ ಹೊಸ ಭಾವ ಹೊಸ ವೇಗದಿಂದ.' ಜೀವನದಲ್ಲಿ ಪ್ರಗತಿ ಸಾಧಿಸಲು ಹೊಸ ಹಾದಿಯನ್ನು ಕಂಡುಕೊಳ್ಳಬೇಕು. ಅಂದರೆ ಸಾಂಪ್ರದಾಯಿಕ ಮಾರ್ಗವನ್ನು ಬಿಟ್ಟು ಹೊಸ ಆಲೋಚನೆ ಮತ್ತು ಹೊಸ ಪ್ರಯತ್ನದಿಂದ ಮುನ್ನಡೆಯಬೇಕು. ಇತಿಹಾಸ ಸೃಷ್ಟಿಸುವುದು, ಇತಿಹಾಸದ ಪುಟಗಳಲ್ಲಿ ಜಾಗ ಪಡೆಯುವುದು ಅಷ್ಟೇನು ಸುಲಭದ ಕೆಲಸವಲ್ಲ. ಅದು ಯಾರೂ




ನಡೆಯದ ಹಾದಿ. ಹಾದಿಯನ್ನು ನಾವೇ ಸೃಷ್ಟಿಸಬೇಕು. ಈಗಾಗಲೇ ಸಾವಿರಾರು ಜನರು ನಡೆದ ದಾರಿಯಾದರೆ ಅಲ್ಲಿ ಕಲ್ಲು ಮುಳ್ಳುಗಳು ವಿರಳ. ನಮ್ಮದೇ ಆದ ಹೊಸ ದಾರಿ ಸೃಷ್ಟಿಸುವಾಗ ಆ ಹಾದಿಯಲ್ಲಿ ಹೆಜ್ಜೆ ಹೆಜ್ಜೆಗೂ ಕಲ್ಲು ಮುಳ್ಳುಗಳು ಅಡೆತಡೆಗಳು ಎದುರಾಗುವುದು ಸಹಜ. ಅಡೆತಡೆಗಳನ್ನು ಅಡಚಣೆಗಳೆಂದು ತಿಳಿಯದೇ ಅವಕಾಶಗಳೆಂದು ಮುನ್ನುಗ್ಗಿದರೆ ಗೆಲುವಿನ ಶಿಖರ ಏರುವುದು ಖಂಡಿತ.

**ಮಾರ್ಗದರ್ಶನ**

ಅತಿ ಕಡಿಮೆ ಹಣದೊಂದಿಗೆ ಮುಂಬೈಗೆ ಬಂದು ಇಂದು ದೇಶದ ಬೃಹತ್ ಉದ್ಯಮದ ಸಾಮ್ರಾಜ್ಯಕ್ಕೆ ಅಡಿಪಾಯ ಹಾಕಿದ ಧೀರೂ ಭಾಯಿ ಅಂಬಾನಿ ನಮಗೆಲ್ಲ ಮಾದರಿ. ಚಂದ್ರನಿಲ್ಲದೆಡೆ ನಕ್ಷತ್ರಗಳ ಮಾರ್ಗದರ್ಶನ ಪಡೆದು ನಡೆಯಬೇಕು. ಈಗಾಗಲೇ ಸಾಕಷ್ಟು ಸಾಧಕರು ಸಾಧನೆಯ ಹಾದಿಯಲ್ಲಿ ಸಾಗಿ ನಕ್ಷತ್ರಗಳಾಗಿ ಸಾಧನೆಯ ಅಂಬರದಲ್ಲಿ ಮಿಂಚುತ್ತಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಡೆಯಬೇಕು. ದೊಡ್ಡವರೆನಿಸಿಕೊಂಡವರು, ಹುಟ್ಟಿನಿಂದಲೇ ದೊಡ್ಡವರಾಗಿರಲಿಲ್ಲ. ಯಾರೂ ಕೂಡ ಹುಟ್ಟುತ್ತಲೇ ಗೆಲುವಿನ ಶಿಖರದಲ್ಲಿರುವುದಿಲ್ಲ. ಪ್ರತಿಯೊಬ್ಬರೂ ತಮ್ಮದೇ ಆದ ಗೆಲುವಿನ ಪಯಣ ಆರಂಭಿಸಬೇಕು. ಅದರಲ್ಲೂ ಕೆಲವರು ಶೂನ್ಯದಿಂದಲೇ ಪ್ರಯಾಣ ಆರಂಭಿಸಬೇಕಾಗುತ್ತದೆ. ಅವರೆಲ್ಲ ಕತ್ತಲೆಯ ನಂತರ ಬೆಳಕು ಬಂದೇ ಬರುತ್ತದೆಂಬ ವಿಶ್ವಾಸದಿಂದ ಪ್ರಾಮಾಣಿಕತೆಯಿಂದ ಪರಿಶ್ರಮದ ಹಾದಿಯಲ್ಲಿ ಸಾಗುತ್ತಾರೆ. ಹಾಗೆಯೇ ನಾವೂ ಸಹ ಅವಿರತ ಪ್ರಯತ್ನದ ಹಾದಿಯಲ್ಲಿ ಸಾಗಿದರೆ, ಅದು ಯಶಸ್ಸಿನ ಶಿಖರಕ್ಕೆ ಕರೆದೊಯ್ಯುತ್ತದೆ.

■ ಲೇಖನ.
ಜಯಶ್ರೀ ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಎಸ್.ಎಸ್.ಎಲ್.ಸಿ ಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಹಾವೇರಿಯ ಹುಕ್ಕೇರಿ ಮಠದ ಲಿಂ.ಶಿವಬಸವ ಮಹಾ ಶಿವಯೋಗಿಗಳ ಜನ್ಮಸ್ಥಳ ಸಪ್ತಸಾಗರದಲ್ಲಿ ಶ್ರೀ ಶಿವಬಸವ ಗುರು ಮಂದಿರದ ಪ್ರಥಮ ವರ್ಷಾಚರಣೆ ಸಮಾರಂಭ ಜರುಗಿತು.

ತಾಲೂಕಿನ ಸಪ್ತಸಾಗರ ಶಾರದಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ, ಸಪ್ತಸಾಗರ ಪ್ರೌಢಶಾಲೆಯ ಎಸ್.ಎಸ್.ಎಲ್ .ಸಿ ಪರೀಕ್ಷಾ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಸನ್ಮಾನಿಸಲಾಯಿತು.

ಶೇಗುಣಸಿ ಎಸ್ ಎಸ್ ಎಲ್ ಸಿ ಪರೀಕ್ಷಾ ಕೇಂದ್ರಕ್ಕೆ ಪ್ರಜ್ವಲ ರಾವಸಾಬ ಬಮ್ಮಣ್ಣವರ 98.88% ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ ಹಾಗೂ ವರ್ಷಿತಾ ಭರಮಗೌಡ ಪಾಟೀಲ 97.92% ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿನಿಗೆ ಮತ್ತು ಅಶ್ವಥ ಮಲ್ಲಪ್ಪ ತೇಲಿ 96.16% ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಹಾವೇರಿಯ ಶ್ರೀ.ಮ.ನಿ.ಪ್ರ. ಸದಾಶಿವ ಮಹಾಸ್ವಾಮಿಗಳು ಹಾಗೂ ಹಲ್ಯಾಳದ ಶ್ರೀ.ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ಹಾಗೂ ಗಣ್ಯ–ಮಾನ್ಯರು ಸೇರಿ ಸತ್ಕಾರ ಮಾಡಿದರು.

ಡಿಸ್ಟಿಂಕ್ಷನ್ ದಲ್ಲಿ 14 ಮಕ್ಕಳು, ಪ್ರಥಮ ಶ್ರೇಣಿಯಲ್ಲಿ 16 ಮಕ್ಕಳು ಉತ್ತೀರ್ಣ ಹೊಂದಿ, ಸಪ್ತಸಾಗರ ಗ್ರಾಮಕ್ಕೆ ಹಾಗೂ ಪ್ರೌಢಶಾಲೆಗೆ ಕೀರ್ತಿ ತಂದಿದ್ದಕ್ಕೆ ಎಲ್ಲ ಮಕ್ಕಳಿಗೆ ಆಶೀರ್ವಾದ ಮಾಡಿದರು.

ಈ ವೇಳೆ ಆರ್.ಎ. ಪಾಟೀಲ, ರಾಜು ನಾಡಗೌಡ, ಬಾಬಾಲಾಲ ನದಾಫ, ಸದಾಶಿವ ಹನಗಂಡಿ, ಡಿ.ಬಿ.ನದಾಫ, ರವೀಂದ್ರ ಬಮ್ಮಣ್ಣವರ, ಅಶೋಕ ಐಗಳಿ, ಪರಮಾನಂದ ತೇಲಿ, ಚಂದ್ರಕಾಂತ ಸಂಕ್ರಟ್ಟಿ, ರಾಮು ಗಸ್ತಿ, ಶಂಕರ ಕೊಳೇಕಾರ, ಪರಶುರಾಮ ಕೊಳೇಕರ, ಮುಕುಂದ ತೀರ್ಥ, ಪಿ.ಡಿ.ಓ ಅಚ್ಯುತ ಕುಲಕರ್ಣಿ, ಹಾರೂನ ಮುಲ್ಲಾ, ಮಹಾವೀರ ಬಿಲಕರ, ಗ್ರಾಮ ಲೆಕ್ಕಾಧಿಕಾರಿ ಅಶೋಕ ಕೋಗಿಲೆ, ಚಿದಾನಂದ ಮಾಂಗ, ಮಲ್ಲಪ್ಪ ಜಗದಾಳ, ಮಲ್ಲು ದರೂರು ಸೇರಿದಂತೆ ಇನ್ನಿತರರಿದ್ದರು.

# ಕೆರೆ ಭರ್ತಿಗೆ ಕಾಲುವೆಗೆ ನೀರು ಹರಿಸಲು ಆಗ್ರಹಿಸಿ ಪ್ರತಿಭಟನೆ

## ಆಲಮಟ್ಟಿ ಸಿಇ ಕಚೇರಿಗೆ ರೈತರ ಮುತ್ತಿಗೆ | ಕ್ಲೋಸರ್ ಕಾಮಗಾರಿ ವಿಳಂಬಕ್ಕೆ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಈ ಬೇಸಿಗೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ಜಿಲ್ಲೆಯ ಎಲ್ಲ ಕೆರೆಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲು ಕೂಡಲೇ ಎಲ್ಲ ಕಾಲುವೆಗಳಿಗೆ ನೀರು ಹರಿಸಬೇಕು ಹಾಗೂ ಕ್ಲೋಸರ್ ಕಾಮಗಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಆಗ್ರಹಿಸಿ ಮಂಗಳವಾರ ಅಖಂಡ ಕರ್ನಾಟಕ ರೈತ ಸಂಘ ಮತ್ತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಂಟಿಯಾಗಿ ಬೃಹತ್ ಪ್ರತಿಭಟನೆ ನಡೆಸಿದವು.

ಆಲಮಟ್ಟಿಯ ರಾಮಲಿಂಗೇಶ್ವರ ದೇವಸ್ಥಾನದಿಂದ ನೂರಾರು ರೈತರು ಪ್ರತಿಭಟನಾ ಮೆರವಣಿಗೆ ನಡೆಸಿ ಸಿಇ ಕಚೇರಿಗೆ ತೆರಳಿ ಮುಖ್ಯ ಅಭಿಯಂತರ ಡಿ. ಬಸವರಾಜ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ತಾಲ್ಲೂಕಾಧ್ಯಕ್ಷ ಸೀತಪ್ಪ ಗಣಿ, "ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದ ವ್ಯಾಪ್ತಿಗೆ ಬರುವ ಮುಳವಾಡ ಮತ್ತು ಚಿಮ್ಮಲಗಿ ಏತ ನೀರಾವರಿ ಯೋಜನೆ ವ್ಯಾಪ್ತಿಯ ಕಾಲುವೆಗಳಿಗೆ ಹಿಂಗಾರು ಬೆಳೆಗಳಿಗೆ ನೀರು ಹರಿಸಿ ನಂತರ ನೀರು ಪೂರೈಕೆ ಸ್ಥಗಿತಗೊಳಿಸಲಾಗಿದೆ. ಬೇಸಿಗೆಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ಪ್ರಾದೇಶಿಕ ಆಯುಕ್ತರ ಅನುಮತಿಯಂತೆ ಏಪ್ರಿಲ್ 30ರವರೆಗೆ ಕೆರೆಗಳಿಗೆ ನೀರು ಹರಿಸಿ ಸದ್ಯ ಸ್ಥಗಿತಗೊಳಿಸಲಾಗಿದೆ" ಎಂದರು.

"ಆದರೆ ಇಲ್ಲಿಯವರೆಗೂ ಕೇವಲ ಶೇ.30ರಿಂದ 35ರಷ್ಟು ಮಾತ್ರ ಕೆರೆಗಳು ಭರ್ತಿಯಾಗಿವೆ. ಈ ಬಾರಿ ಬೇಸಿಗೆಯ ತಾಪ ಹೆಚ್ಚಿರುವುದರಿಂದ ಅಲ್ಪ ಪ್ರಮಾಣದಲ್ಲಿ ಹರಿಸಿದ ನೀರು ಬೇಗನೆ ಆವಿಯಾಗಿ ಖಾಲಿಯಾಗುತ್ತಿದೆ. ಇನ್ನೂ ಒಂದು ತಿಂಗಳು ಬೇಸಿಗೆ ಇರುವುದರಿಂದ ಕೆರೆಗಳಲ್ಲಿನ ನೀರು ಬೇಗನೆ ಬರಿದಾಗಲಿದೆ.

ಮುಂದೆ ಜಾನುವಾರುಗಳಿಗೆ ಕುಡಿಯಲು ನೀರು



ಸಿಗುವುದಿಲ್ಲ. ಆದ್ದರಿಂದ ತುರ್ತಾಗಿ ಕಾಲುವೆಗಳಿಗೆ ನೀರು ಹರಿಸಿ ಜಿಲ್ಲೆಯ ಎಲ್ಲ ಕೆರೆಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಬೇಕು" ಎಂದು ಆಗ್ರಹಿಸಿದರು.

"ಕಾಲುವೆಗೆ ನೀರು ಹರಿಸುವುದನ್ನು ಸ್ಥಗಿತಗೊಳಿಸಿದ ಕೂಡಲೇ ಕ್ಲೋಸರ್ ಕಾಮಗಾರಿ ಪ್ರಾರಂಭಿಸಬೇಕು. ಪ್ರತಿ ವರ್ಷ ಕ್ಲೋಸರ್ ಕಾಮಗಾರಿ ಕುಂಠಿತಗೊಳ್ಳುತ್ತಿದೆ. ಸರಿಯಾಗಿ ಕಾಮಗಾರಿ ಮಾಡದ ಕಾರಣ ನೀರು ಬಿಟ್ಟಾಗ ಕಾಲುವೆಯಿಂದ ಸರಾಗವಾಗಿ ಹರಿಯುವುದಿಲ್ಲ. ಇದರಿಂದ ಕಾಲುವೆಯ ಕೊನೆಯ ಭಾಗದವರೆಗೂ ನೀರು ತಲುಪದೆ ರೈತರು ವಂಚಿತರಾಗುತ್ತಿದ್ದಾರೆ" ಎಂದು ದೂರಿದರು.

"ಪ್ರತಿ ವರ್ಷ ಕಾಲುವೆ ಸ್ವಚ್ಛಗೊಳಿಸಲು ಕ್ಲೋಸರ್ ಕಾಮಗಾರಿ ಮತ್ತು ವಾರ್ಷಿಕ ನಿರ್ವಹಣಾ ವೆಚ್ಚ (ಎಓಎಂ) ಎಂದು ಎರಡು ರೀತಿಯ ಯೋಜನೆ ಹಮ್ಮಿಕೊಳ್ಳಲಾಗುತ್ತದೆ. ಈ ಎರಡೂ ಯೋಜನೆಗಳಡಿ ಪ್ರತಿ ವರ್ಷ ಕೋಟ್ಯಂತರ ರೂ. ವ್ಯಯವಾಗುತ್ತಿದೆ. ಎರಡೂ ಯೋಜನೆಗಳ ಉದ್ದೇಶ ಒಂದೇ – ಕಾಲುವೆಯ ಹೂಳು, ಗಿಡಗಂಟಿಗಳನ್ನು ತೆರವುಗೊಳಿಸುವುದು. ಹೀಗಿದ್ದರೂ ಅನಾವಶ್ಯಕವಾಗಿ ಎರಡು ಯೋಜನೆಗಳ ನೆಪದಲ್ಲಿ ಸಾರ್ವಜನಿಕರ ಹಣ ದುರುಪಯೋಗ ಆಗುತ್ತಿದೆ ಎಂಬ ಅನುಮಾನವಿದೆ" ಎಂದು ಆರೋಪಿಸಿದರು.

"ಹೆಸರಿಗೆ ಮಾತ್ರ ಕ್ಲೋಸರ್ ಕಾಮಗಾರಿ ಮತ್ತು ಎಓಎಂ ಇದೆ. ಆದರೆ ವಾಸ್ತವಿಕವಾಗಿ ಕಾಲುವೆ ಸ್ವಚ್ಛಗೊಳಿಸುವ ಕಾರ್ಯ ನಡೆಯುವುದಿಲ್ಲ. ಇದರಿಂದ ಯೋಜನೆಯ ಉದ್ದೇಶವೇ ಹಳ್ಳ ಹಿಡಿದಂತಾಗಿದೆ. ಆದ್ದರಿಂದ ಕ್ಲೋಸರ್ ಕಾಮಗಾರಿಯನ್ನು ಪ್ರಾಮಾಣಿಕವಾಗಿ ಕೈಗೊಳ್ಳಬೇಕು" ಎಂದು ಅರವಿಂದ ಕುಲಕರ್ಣಿ ಹಾಗೂ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ ಒತ್ತಾಯಿಸಿದರು.

ಈ ಕುರಿತು ಜಿಲ್ಲಾಧಿಕಾರಿಗಳು ಸಿಇ ಅವರಿಂದ ಅನುಮತಿ ಪಡೆಯಲು ಪ್ರಾದೇಶಿಕ ಆಯುಕ್ತರಿಗೆ ಪತ್ರ ರವಾನಿಸಿದ್ದಾರೆ ಎಂದು ತಿಳಿದುಬಂದಿದೆ.

ಪ್ರತಿಭಟನೆಯಲ್ಲಿ ಪ್ರಲ್ಹಾದ ನಾಗರಾಳ, ಸಾಯಬಣ್ಣ ಅಂಗಡಿ, ಇಬ್ರಾಹಿಂ ವಾಲೀಕಾರ, ಮಲ್ಲಪ್ಪ ಹಳೆನಿಡಗುಂದಿ, ಬಸಪ್ಪ ತೋಳಮಟ್ಟಿ, ಶ್ರೀಶೈಲ ಕಲಾದಗಿ, ಗುರಪ್ಪ ಪೂಜಾರಿ, ಸಂದೀಪ ನಾಗರಡ್ಡಿ, ಸೋಮೇಶ ನಾಗರಡ್ಡಿ, ಮುದಕಪ್ಪ ಮೇಟಿ, ಮಂಜು ಬಿರಾದಾರ, ಅಶೋಕ ಹಡಪದ, ಎಮನೂರಪ್ಪ ಸರೂರ, ಸಂಗು ಮೇಟಿ, ಹಣಮಂತ ವಾಲೀಕಾರ, ಪರಶೂರಾಮ ಮುತ್ತಗಿ, ಪ್ರಕಾಶ ವಾಲೀಕಾರ, ಶಿವಪ್ಪ ಚಲುವಾದಿ, ಸಂಗಪ್ಪ ಹುನಗುಂದ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

# ಯಡಿಯೂರಪ್ಪ ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳಲು ಬೆಳ್ಳುಬ್ಬಿ ಕರೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ರಾಜಕೀಯ ಜೀವನದಲ್ಲಿ 50 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿರುವ ಹಿನ್ನಲೆಯಲ್ಲಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ಗೌರವಾರ್ಥವಾಗಿ ಮೇ 9 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ವಿಜಯಪುರ ಜಿಲ್ಲೆ ಹಾಗೂ ಬಸವನಬಾಗೇವಾಡಿ ಮಂಡಲದಿಂದ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಕಾರ್ಯಕರ್ತರು ಅಭಿಮಾನಿಗಳು ಪಕ್ಷಾತೀತವಾಗಿ ಪಾಲ್ಗೊಳ್ಳುವಂತೆ ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯಡಿಯೂರಪ್ಪ ಅವರ ದೀರ್ಘ ರಾಜಕೀಯ ಪಯಣ ರಾಜ್ಯ ರಾಜಕೀಯದಲ್ಲಿ ಮಹತ್ವದ ಮೈಲುಗಲ್ಲಾಗಿದ್ದು, ರೈತರು, ಬಡವರು ಹಾಗೂ ಹಿಂದುಳಿದ ವರ್ಗಗಳ ಪರವಾಗಿ ಅವರು ನೀಡಿದ ಕೊಡುಗೆ ಅಪಾರವಾಗಿದೆ.

ರೈತಪರ ನೀತಿಗಳು, ಗ್ರಾಮೀಣಾಭಿವೃದ್ಧಿಗೆ ನೀಡಿದ ಕೊಡುಗೆಗಳು ಹಾಗೂ ಸಾಮಾನ್ಯ ಜನರೊಂದಿಗೆ ಹೊಂದಿರುವ ನಂಟು ಯಡಿಯೂರಪ್ಪರನ್ನು ಜನಪ್ರಿಯ ನಾಯಕರನ್ನಾಗಿ ಮಾಡಿವೆ ಎಂದು ಹೇಳಿದರು.

ವಿಜಯಪುರ ಜಿಲ್ಲೆ ಹಾಗೂ ಬಸವನಬಾಗೇವಾಡಿ ಮತಕ್ಷೇತ್ರಕ್ಕೆ ಅವರು ಅಪಾರವಾದ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಮಹತ್ವದ ಕ್ಷಣವನ್ನು ಆಚರಿಸುವ ಅಭಿಮಾನೋತ್ಸವಕ್ಕೆ ವಿಜಯಪುರ ಜಿಲ್ಲೆ ಹಾಗೂ ಬಸವನಬಾಗೇವಾಡಿ ಮತಕ್ಷೇತ್ರದ ಪ್ರತಿ ಗ್ರಾಮದಿಂದ ಕಾರ್ಯಕರ್ತರು, ಪಕ್ಷದ ಎಲ್ಲಾ ಹಂತದ ಪದಾಧಿಕಾರಿಗಳು, ಯುವಕರು, ಮಹಿಳೆಯರು ಹಾಗೂ ಅಭಿಮಾನಿಗಳು ಪಕ್ಷಾತೀತವಾಗಿ ಶಿಸ್ತಿನಿಂದ ಹಾಗೂ ಉತ್ಸಾಹದಿಂದ ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಸವನ ಬಾಗೇವಾಡಿ ಮಂಡಲ ಅಧ್ಯಕ್ಷ ಸಿದ್ದರಾಮ ಕಾಖಂಡಕಿ, ಚಿನ್ನಪ್ಪ ಗಿಡ್ಡಪ್ಪಗೋಳ, ಸಂಗಮೇಶ ಅವಟಿ, ಪರಮಾನಂದ ತನಿಕೆದಾರ, ಮಲ್ಲಿಕಾರ್ಜುನ ದೇವರಮನಿ, ಟಿ.ಟಿ. ಹಗೇದಾಳ,



ಇಸ್ಮಾಯಿಲಸಾಬ ತಹಶೀಲ್ದಾರ, ಶರಣು ಮುರನಾಳ, ಜಗದೀಶ ಸುಣಗದ ಇದ್ದರು.

# ಅಫಜಲಪುರದಲ್ಲಿ ಕಸಾಪ ಸಂಸ್ಥಾಪನಾ ದಿನ ಆಚರಣೆ




■ ಉದಯರಶ್ಮಿ ದಿನಪತ್ರಿಕೆ

ಅಫಜಲಪುರ: ಕನ್ನಡ ಸಾಹಿತ್ಯ ಪರಿಷತ್ತಿನ 112 ನೇ ವರ್ಷದ ಸಂಸ್ಥಾಪನಾ ದಿನಾಚರಣೆಯನ್ನು ಪಟ್ಟಣದ ಕನ್ನಡ ಭವನದಲ್ಲಿ ಆಚರಣೆ ಮಾಡಲಾಯಿತು.

ಬಳಿಕ ಮಾಜಿ ಕಸಾಪ ತಾಲೂಧ್ಯಕ್ಷ ಡಿ. ಎಂ.ನದಾಫ್ ಮಾತನಾಡಿ, ಕನ್ನಡ ಸಾಹಿತದಯ ಪರಿಷತ್ತು ಕನ್ನಡ ನಾಡಿನ ಹೆಮ್ಮೆಯ ಸಂಸ್ಥೆಯಾಗಿದೆ. ಪರಿಷತ್ತಿನ ಧ್ಯೇಯಧೋರಣೆಯನ್ನು ಸಕಾರಗೊಳಿಸುವಲ್ಲಿ ಎಲ್ಲರೂ ಶ್ರಮಿಸಬೇಕು.

ಆಗಾಗ ದತ್ತಿ ಉಪನ್ಯಾಸಗಳು ನಡೆಯುತ್ತಿರಬೇಕು ಎಂದರು.

ಹಿರಿಯ ಮಹಿಳಾ ಲೇಖಕಿ ಅನುಮಪಾ ಅಪಗೊಂಡೆ ಮಾತನಾಡಿ ಯುವ ಜನಾಂಗ ಓದುವ ಹವ್ಯಾಸ ಹೆಚ್ಚಿಸಿಕೊಳ್ಳಬೇಕು ಎಂದರು.

ಹಿರಿಯ ಸಾಹಿತಿ ಮುನೀರ್ ಪಟೇಲ್ ಮಾತನಾಡಿ ತಾಲೂಕಿನ ಹಿರಿಯ ಸಾಹಿತಿಗಳನ್ನು ಗುರುತಿಸಿ ಸನ್ಮಾನಿಸಿರುವುದು ಖುಷಿ ತಂದಿದೆ ಎಂದರು.

ಮಾಜಿ ಕಸಾಪ ತಾಲೂಕಾಧ್ಯಕ್ಷ ಮುರಗೇಂದ್ರ ಮಸಳಿ, ಕಸಾಪ ಅಧ್ಯಕ್ಷ ಪ್ರಭಾವತಿ ಮೇತ್ರಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಕೀಲರ ಸಂಘದ ತಾಲೂಕಾಧ್ಯಕ್ಷ ಅರ್ಜುನ ಕೇರೂರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಸಂಧರ್ಭದಲ್ಲಿ ಮೃತ್ಯುಂಜಯ ಕಳ್ಳಿಮಠ, ಮಲ್ಲಿನಾಥ ಆಲೇಗಾಂವ, ಬಸಣ್ಣ ಗುಣಾರಿ, ಗುರಣ್ಣ ಪಡಶೆಟ್ಟಿ, ಜಗದೇವಪ್ಪ ಅಂಜುಟಗಿ, ಶೇಕಪ್ಪ ಮಾಸ್ತಾರ ಜೋಗೂರ, ಬಿ.ಎಂ.ರಾವ್, ಗೋಪಾಲ ಹಳ್ಯಾಳ, ಚಿನ್ನು ಮನಿಯಾರ, ಗೌತಮ ಸಕ್ಕರಗಿ, ಬಿ.ಡಿ.ಅಂಜುಟಗಿ, ಭಾಗ್ಯಶ್ರೀ ಹಳ್ಯಾಳ, ಸುಶ್ಮೀತಾ ಅತ್ತೆ, ಐಶ್ವರ್ಯ ಡಿ.ರೇವೂರ, ಚಂದ್ರ ಜಮಶೆಟ್ಟಿ, ಪ್ರತಿಭಾ ಮಹಿಂದ್ರಕರ್ ಇದ್ದರು.

ಕಸಾಪ ಗೌರವ ಕಾರ್ಯದರ್ಶಿಗಳಾದ ಡಾ.ಸಂಗಣ್ಣ ಎಂ.ಸಿಂಗೆ ಕಾರ್ಯಕ್ರಮ ನಿರೂಪಿಸಿದರು. ಪರಮಾನಂದ ಸರಸಂಬಿ ಸ್ವಾಗತಿಸಿದರು.

# ವೈದ್ಯಕೀಯ- ಇಂಜಿನಿಯರಿಂಗ್ ಗಿಂತ ಕೃಷಿ ಪದವಿಗಳಿಗೆ ಬೇಡಿಕೆ ಹೆಚ್ಚು




ಕಲಬುರಗಿ: ವೈದ್ಯಕೀಯ ಎಂಜಿನಿಯರಿಂಗ್ ಕೋರ್ಸ್ ಗಳಿಗಿಂತ ಕೃಷಿಗೆ ಸಂಬಂಧಿತ ಕೋರ್ಸ್ ಗಳಿಗೆ ಹೆಚ್ಚಿನ ಭವಿಷ್ಯ ಹಾಗೂ ಬೇಡಿಕೆಯಿದೆ ಎಂದು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಯುವ ಘಟಕದ ರಾಷ್ಟ್ರೀಯ ಮಾಧ್ಯಮ ಸಂಯೋಜಕ ಚೇತನಗೌಡ ಎಸ್. ಗೋನಾಯಕ ಹೇಳಿದರು.

ನಗರದ ಸಂಗಮೇಶ್ವರ ಕಾಲೋನಿಯ ಪಂಚಮುಖಿ ಹನುಮಾನ ದೇವಸ್ಥಾನದ ಪಕ್ಕದಲ್ಲಿರುವ ಡಾ. ಬುಜುರ್ಕೆ ಅಕಾಡೆಮಿ ಆಯೋಜಿಸಿದ್ದ ಬಿಎಸ್ಸಿ ಅಗ್ರಿ ಕೋರ್ಸ್ ಮತ್ತು ಕೃಷಿಗೆ ಸಂಬಂಧಿಸಿದ ಕೋರ್ಸ್ ಗಳ ಪ್ರಾಯೋಗಿಕ (ಸಿಇಟಿ) ಪರೀಕ್ಷೆಯ ತರಬೇತಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಹಿಂದುಳಿದ ಈ ಭಾಗದಲ್ಲಿ ಕೃಷಿಗೆ ಸಂಬಂಧಿತ ಕೋರ್ಸ್ ಗಳ ಪ್ರವೇಶಾತಿ ಕುರಿತು ಡಾಣ ಬುಜುರ್ಕೆ ಅಕಾಡೆಮಿ ತರಬೇತಿ ಕೊಡುತ್ತಿರುವುದು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಕೋರ್ಸ್ ಗೆ ಆಯ್ಕೆಯಾಗುತ್ತಿರುವುದು ದೊಡ್ಡ ಕೊಡುಗೆ. ವಿದ್ಯಾರ್ಥಿಗಳಲ್ಲಿ ಪಿಯುಸಿ ನಂತರ ಮುಂದೇನು? ಎಂಬುದರ ಕುರಿತಾಗಿ ಸ್ಪಷ್ಟತೆ ಇರಬೇಕು. ಪ್ರಮುಖವಾಗಿ ಯಾರದ್ದೋ ನೋಡಿ ಹಾಗೂ ಒತ್ತಡಕ್ಕೆ ಒಳಗಾಗಿ ಕೋರ್ಸ್ ಆಯ್ಕೆ ಮಾಡಿಕೊಳ್ಳಬೇಡಿ, ಇಚ್ಛೆಯ ಕೋರ್ಸ್ ಸೇರಿ ಭವಿಷ್ಯ ರೂಪಿಸಿಕೊಳ್ಳಿ ಎಂದರು.

ರಾಜ್ಯದಲ್ಲಿ ಈಗ ಭರ್ತಿ ಮಾಡಿಕೊಳ್ಳಬೇಕೆಂದಿರುವ 52 ಸಾವಿರ ಹುದ್ದೆಗಳಲ್ಲಿ 36 ಸಾವಿರ ಕಲ್ಯಾಣ ಕರ್ನಾಟಕ ಭಾಗದ್ದಾಗಿವೆ. ಹೀಗಾಗಿ ಈ ಭಾಗದವರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿರುವುದು ಅಭಿವೃದ್ಧಿಪೂರಕ. ಇಷ್ಟೊಂದು ಹುದ್ದೆಗಳು ದೊರಕಲು 371ಜೆ ವಿಧಿ ಜಾರಿಗೆ ತಂದಿರುವುದೇ ಕಾರಣ ಎಂದು ತಿಳಿಸಿದರು.

ಆಕಾಶವಾಣಿ ಕೇಂದ್ರದ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರು ಹಾಗೂ ಹಿರಿಯ ಪತ್ರಕರ್ತ ಡಾ. ಸದಾನಂದ ಪೆರ್ಲ ಉಪನ್ಯಾಸ ನೀಡಿ, ಪ್ರಯತ್ನವೊಂದೇ ಸಾಧನೆಗೆ ಪೂರಕ. ಆಲಸ್ಯದಿಂದ ಏನು ಸಾಧನೆ ಮಾಡಲಾಗದು. ಪರೀಕ್ಷೆ ಬಂದಾಗೊಮ್ಮೆ ಓದಬೇಡಿ.

ರೈತನೇ ಈ ಜಗತ್ತಿಗೆ ಆಧಾರ. ರೈತನಿಂದಲೇ ಎಲ್ಲರೂ ಎನ್ನುವುದು ಮತ್ತಷ್ಟು ಬಲಬಪಡಿಸಲು ತಾವು ಮುಂದಾಗಬೇಕು ಎಂದರು. ಹಿರಿಯ ಪತ್ರಕರ್ತ ಹಣಮಂತರಾವ್ ಭೈರಾಮಡಗಿ ಮಾತನಾಡಿ, ಬಿಎಸ್ಸಿ ಕೃಷಿ ಪದವಿ ಸರ್ಕಾರಿ ನೌಕರಿ ಪಡೆಯಲು ಎಂಬುದನ್ನು ಇಟ್ಟುಕೊಳ್ಳದೇ ಕೃಷಿ ಕ್ಷೇತ್ರ ಬಲಪಡಿಸಲು ಪದವಿ ಪಡೆಯುವೆ ಎಂಬುದರ ಧ್ಯೇಯ ಇಟ್ಟುಕೊಳ್ಳಿ ಎಂದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ರಾಜು ತೆಗ್ಗಳ್ಳಿ ಮುಖ್ಯ ಅತಿಥಿಯಾಗಿ ಮಾತನಾಡಿ, ವೈದ್ಯಕೀಯ, ಎಂಜಿನಿಯರಿಂಗ್ ಕೋರ್ಸ್ ಗಳಿಗಿಂತ ಕೃಷಿ ಕೋರ್ಸ್ ಗಳೇ ಬೇಡಿಕೆ ಹೆಚ್ಚುತ್ತಿದೆ. ಹೀಗಾಗಿ ಹೆಚ್ಚಿನ ಆಸಕ್ತಿಯಿಂದ ಓದಿ. ಡಾ. ಬುಜುರ್ಕೆ ಅಕಾಡೆಮಿಯಲ್ಲಿ ಕೃಷಿಗೆ ಸಂಬಂಧಿಸಿದ ವಿವಿಧ ಕೋರ್ಸ್ ಗಳ ಪರಿಕರಗಳ ಲ್ಯಾಬ್ ಮತ್ತು ಮಾದರಿಗಳುವಿದ್ಯಾರ್ಥಿಗಳಕಲಿಕೆಗೆಪರಿಣಾಮಕಾರಿಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಡಾ. ಬುಜುರ್ಕೆ ಅಕಾಡೆಮಿ ನಿರ್ದೇಶಕ ಡಾ. ಶಿವರಾಜ ಬುಜುರ್ಕೆ ಪ್ರಾಸ್ತಾವಿಕ ಮಾತನಾಡಿ, ಕಳೆದ 10 ವರ್ಷಗಳಿಂದ ಅಕಾಡೆಮಿಯಿಂದ ಕೃಷಿಗೆ ಸಂಬಂಧಿಸಿದ ವಿವಿಧ ಕೋರ್ಸ್ ಗಳ ಪ್ರಾಯೋಗಿಕ ಪರೀಕ್ಷೆ ಕುರಿತಾಗಿ ತರಬೇತಿ ನೀಡಲಾಗುತ್ತಿದೆ. ವರ್ಷಂಪ್ರತಿ ತಮ್ಮಲ್ಲಿ ತರಬೇತಿ ಪಡೆದವರಲ್ಲಿ 40-50 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಬಿಎಸ್ಸಿ ಕೃಷಿ ಪದವಿ ಕೋರ್ಸ್ ಗಳಿಗೆ ಆಯ್ಕೆಯಾಗುತ್ತಿದ್ದಾರೆ ಎಂದರು.

# ಕನ್ನಡದ ಉಳಿವಿಗಾಗಿ ಹೋರಾಟ ಅಗತ್ಯ : ಸಂಗೀತಾ ರಾಠೋಡ



**ವಿಜಯಪುರ ಕಸಾಪ ಬಬಲೇಶ್ವರ ಘಟಕದ ವತಿಯಿಂದ ಕಸಾಪ ಸಂಸ್ಥಾಪನಾ ದಿನಾಚರಣೆ**

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಉಳಿಗಾಗಿ ನಾವು ಒಂದಾಗಬೇಕಿದ್ದು, ಬೇರೆ ಬೇರೆ ಭಾಷೆಯಿಂದ ಕನ್ನಡ ಮರೆಯಾಗುತ್ತಿರುವುದು ನೋವಿನ ಸಂಗತಿ. ಆದಕ್ಕಾಗಿ ಪ್ರತಿಯೊಬ್ಬರೂ ಪ್ರತಿಜ್ಞೆ ಮಾಡಿ, ಕನ್ನಡ ಉಳಿವಿಗಾಗಿ ಹೋರಾಟ ಮಾಡಬೇಕು ಎಂದು ರೈತ ಹೋರಾಟಗಾರ್ತಿ ಸಂಗೀತಾ ರಾಠೋಡ ಹೇಳಿದರು.

ನಗರದಲ್ಲಿ ಬಬಲೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನಡೆದ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಬಬಲೇಶ್ವರ ಕಸಾಪ ತಾಲೂಕು ಅಧ್ಯಕ್ಷ ಹಾಗೂ ಪತ್ರಕರ್ತ ಖಾಜಾಮೈನುದ್ದೀನ್ ಪಟೇಲ್ ಮಾತನಾಡಿ, ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಜನ್ಮತಾಳಿದ ಏಕೈಕ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು. ಸುಮಾರು ಒಂದು ಶತಮಾನಕ್ಕೂ ಅಧಿಕ ಇತಿಹಾಸವಿರುವ ಈ ಸಂಸ್ಥೆಯು ಕೇವಲ ಒಂದು ಕಟ್ಟಡವಲ್ಲ, ಅದು ಏಳು ಕೋಟಿ ಕನ್ನಡಿಗರ ಭಾವನಾತ್ಮಕ ಕೇಂದ್ರವಾಗಿದೆ ಎಂದರು.

ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ಬಬಲೇಶ್ವರದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಮಕಬುಲ್ ಕೇಜಿ, ಶರಣ ಚಿಂತಕ ರಾಜುಗೌಡ ಬಿರಾದಾರ, ಕಸಾಪ ಪದಾಧಿಕಾರಿ ಮೀರಾಸಾಬ ದಳವಾಯಿ, ಮಹಾದೇವ ಹರಿಜನ, ರೇಖಾ ಬಿರಾದಾರ, ನಿಲಾಂಬಿಕಾ ಬಿರಾದಾರ, ಅನಸೂಯಾ ಬಡಿಗೇರ, ಜಾವೀದ್ ಇನಾಮದಾರ, ಚಂದ್ರು ಚಲವಾದಿ ಪಾಲ್ಗೊಂಡಿದ್ದರು.

# ಬದುಕಿನಲ್ಲಿ ಗುರುವಿನ ಋಣ ಬಹಳ ದೊಡ್ಡದು



ಕಲಬುರಗಿ: ತಾಲೂಕಿನ ಹೊನ್ನಕಿರಣಗಿ ಶಾಲೆಯಲ್ಲಿ ಓದು ಮುಗಿಸಿದ ಬಳಿಕ ಉದ್ಯೋಗ ಅರಸಿ ನಾನಾ ಕಡೆ ನೆಲೆಗೊಂಡಿದ್ದ 2006 ನೇ ಸಾಲಿನ ಎಸ್, ಎಸ್, ಎಲ್, ಸಿವಿದ್ಯಾರ್ಥಿಗಳೆಲ್ಲರೂ ಒಂದೆಡೆ ಸಂಭ್ರಮಿಸಿದರು. ಶಾಲಾ ದಿನಗಳ ಹಳೆಯ ಸವಿ ನೆನಪುಗಳನ್ನು ಮೆಲುಕು ಹಾಕಿದರು. ಸ್ನೆ?ಹ ಸಮ್ಮಿಲನದೊಂದಿಗೆ 20 ವರ್ಷಗಳ ಹಿಂದೆ ಅಕ್ಷರ ಜ್ಞಾನ ಕಲಿಸಿದ ಶಿಕ್ಷಕರನ್ನು ಕರೆತಂದು ಸನ್ಮಾನಿಸಿದರು. ಹೊನ್ನಕಿರಣಗಿ ಗ್ರಾಮದ ಶ್ರೀ ರಾಚೋಟೇಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಇಂತಹುದೊಂದು ವಾತಾವರಣ ಕಂಡು ಬಂದಿತು.ಬಹಳ ವಿಶೇಷ ಸಂದರ್ಭ "ಗುರುಗಳಿಂದ ವಿದ್ಯಾರ್ಥಿಗೆ ಕೈತಿತ್ತು" ನೀಡಿರುವುದು . ನಂತರ ಮೊದಲಿನ ಹಾಗೆ ಶಾಲಾಯ ಕೋಣೆಯಲ್ಲಿ

ಪಾಠವನ್ನು ಹೇಳಿ ಹಳೆಯ ನೆನಪು ಮತ್ತೆ ಮರುಕಳಿಸುವ ಹಾಗೆ ಮಾಡಿದರು . 20 ವರ್ಷಗ ಹಿಂದೆ ತಮಗೆ ಶಿಕ್ಷಣ, ಸಂಸ್ಕಾರ. ಜೀವನ ಮೌಲ್ಯವನ್ನು ತಿಳಸಿದ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಶ್ರೀ ರಾಚೋಟೇಶ್ವರ ಸಂಸ್ಥಾನ ಮಠದ ಒಡೆಯರಾದ ಪೂಜ್ಯ ಶ್ರೀ ಚಂದ್ರಗುಂಡ ಶಿವಾಚಾರ್ಯರಿಗೆ ತುಲಾಭಾರ ನೆರವೇರಿಸಿದರು ನಂತರ ಗುರುಗಳಿಗೆ ಗುರು ಮಾತೆಯರಿಗೆ ಸನ್ಮಾನಿಸಲಾಯಿತು, ವಿದ್ಯಾರ್ಥಿಗಳ ಪ್ರಿ?ತಿ, ಅಭಿಮಾನವನ್ನು ಕಂಡು ಹಲವು ಶಿಕ್ಷಕರು ಆನಂದಿಂದ ಕಣ್ಣಿ?ರಾದರು. ಇದಕ್ಕೆ ಕಾರಣವಾದದ್ದು ಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನ ಕಾರ್ಯಕ್ರಮ. ಸಮಾನ ಮನಸ್ಕ ವಿದ್ಯಾರ್ಥಿಗಳ ಸತತ ಪ್ರಯತ್ನದ ಫಲವಾಗಿ ನಡೆದ ಈ ಕಾರ್ಯಕ್ರಮಕ್ಕೆ ಶಾಲೆಯು ಸಾಕ್ಷಿಯಾಯಿತು.

ಹಳೆಯ ವಿದ್ಯಾರ್ಥಿಗಳ ಪೈಕಿ 20 ಕ್ಕೂ ಹೆಚ್ಚು ಮಂದಿ ಸ್ನೆ?ಹ ಸಮ್ಮಿಲನ'ದಲ್ಲಿಒಗ್ಗೂಡಿದ್ದರು. ಎರಡು ದಶಕಗಳ ಬಳಿಕ ಒಬ್ಬರನ್ನೊಬ್ಬರು ನೋಡಿ ಪರಸ್ಪರ ಉಭಯ ಕುಶಲೋಪರಿ ವಿಚಾರಿಸಿದರು. 'ಧಿಸೆಲ್ಫಿ' ಸಂಭ್ರಮದಲ್ಲಿಮು ಳುಗೆದ್ದರು.ಶಾಲೆಯ ಆವರಣದಲ್ಲಿಹಬ್ಬದ ವಾತಾವರಣ ಸೃಷ್ಟಿಯಾಗಿತ್ತು. ವಿದ್ಯಾರ್ಥಿಗಳ ಪ್ರಿ?ತಿ-ಅಭಿಮಾನ ಕಂಡು ಹಲವು ಶಿಕ್ಷಕಿಯರು ಆನಂದ ಭಾಷ್ಪದಿಂದ ಹರಿಸಿ ಹಾರೈಸಿದರು. ಇದೇ ವೇಳೆ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ನಮ್ಮ ಬದುಕಿನಲ್ಲಿ ಮೂರು ವಿಷಯವನ್ನು ಎಂದು ಮರೆಯಬಾರದು . ಭೂಮಿಯ ಋಣ,ತಂದೆತಾಯಿಯ ಋಣ, ವಿದ್ಯೆ ಕಲಿಸಿದ ಗುರುವಿನ ಋಣ, ಅಂತ ಋಣವನ್ನು ಮರೆಯದೆ ಇರುವುದಕ್ಕೆ ಇಂಥ ಕಾರ್ಯಕ್ರಮವಾಗಿದೆ ನಮ್ಮ ಶಿಕ್ಷಣ ಸಂಸ್ಥೆ ಎಷ್ಟು ದೊಡ್ಡ ಮಟ್ಟದಲ್ಲಿ ಬೆಳೆಯಲು ಇಂದು ವೇದಿಕೆ ಮೇಲೆ ಇರತಕ್ಕಂತಹ ಎಲ್ಲಾ ಶಿಕ್ಷಕರು ಕಾರಣ ಎಂದು ಪೂಜ್ಯ ಶ್ರೀ ಚಂದ್ರಗುಂಡ ಶಿವಾಚಾರ್ಯರು ಆಶೀರ್ವಚನ ದಯಪಾಲಿಸಿದರು, ಗುರುಗಳಾದ ಸಿದ್ದಮಲ್ಲಯ್ಯ ಹಿರೇಮಠರು ಮಾತನಾಡಿ ಗುರುವಂದನೆ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯುತ್ತಿದ್ದು ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯನ್ನು ಹೆಚ್ಚಿಸಿದೆ, ಜ್ಞಾನದ ಹಸಿವನ್ನು ತೀರಿಸಿ ಬದುಕನ್ನು ರೂಪಿಸುತ್ತಿರುವ ಶಿಕ್ಷಕರ ಸೇವೆ ಸ್ಮರಿಸುವುದು ಅವಿಸ್ಮರಣೀಯ ಎಂದರು,ಗುರುಗಳಾದ ವಿಶ್ವನಾಥ್ ಸರ್. ಅಣ್ಣಾರಯ ಸರ್,ವೇಂಕಟ ರೆಡ್ಡಿ ಸರ್ , ಮಾಂತೂ ಸರ್, ವಿಜಯ್ ಕುಮಾರ ಸರ್ , ಖ್ಯಾದಿಗಮ್ಮ ಮೇಡಂ ನೀಲಕಂಠ ಸರ್,ಚನ್ನು ಸರ್,ಜಯಶ್ರೀ ಮೇಡಂ,ವಿರೇಶ್ ಸರ್,ಭಗವಂತ ಸರ್,ದನರಾಜ್ ಸರ್,ಮಳೇಂದ್ರ ಹಿರೇಮಠ, ಗುರಲಿಂಗಮ್ಮ ಟೀಚರ್ ತಮ್ಮ ಮತ್ತು ವಿದ್ಯಾರ್ಥಿಗಳ ನಡುವಿನ ವಿಶೇಷ ಸಂದರ್ಭಗಳನ್ನು ಹಂಚಿಕೊಂಡರು. ಗುರುವಿಲ್ಲದೆ ಯಾವ ವ್ಯಕ್ತಿಯ ಸಾಧನೆಯು ಅಸಾಧ್ಯ, ಜೀವನದಲ್ಲಿ ತಂದೆ ತಾಯಿ ಗುರುವಾದರೆ ಶಿಕ್ಷಣ ಮೌಲ್ಯವನ್ನು ಪ್ರೇರೇಪಿಸುವವರು ಶಿಕ್ಷಕರಾಗುತ್ತಾರೆ,ಗುರು ಮತ್ತು ಶಿಷ್ಯರ ಮಧ್ಯೆ ಅಪಾರವಾದ ಸಂಬಂಧವನ್ನು ಹೊಂದಿರುತ್ತಾರೆ ಅಂತಹ ಸಂಬಂಧವನ್ನು ಸದಾವಕಾಲ ಇರಿಸಿಕೊಂಡವರು

ವೇದಿಕೆ ಮೇಲಿರುವ ಎಲ್ಲಾ ಗುರುಗಳು ಗುರು ಮಾತೆಯರು ಹೊಂದಿದ್ದಕ್ಕಾಗಿಯೆ ಈ ಗುರು ವಂದನ ಕಾರ್ಯಕ್ರಮ ಎಂದು ಹಳೆಯ ವಿದ್ಯಾರ್ಥಿಯಾದ ಬಂಡಯ್ಯ ಸ್ವಾಮಿ ಸುಂಟನೂರ ಪ್ರಸ್ತಾವಿಕವಾಗಿ ಮಾತನಾಡಿದರು. ವಿಶ್ವರಾಧ್ಯ ಹಿರೇಮಠ ಸ್ವಾಗತಿಸಿದರು, ಗುರುಶಾಂತಮ್ಮ, ಮಹೇಶ್ವರಿ ನಿರೂಪಿಸಿದರು ಮಹಾಂತಯ್ಯ ಹಿರೇಮಠ, ಸಚಿನ್ ಪತ್ತೆಪುರ್ ಅನಿಸಿಕೆ ಹಂಚಿಕೊಂಡರು ಶಿಕ್ಷಣ ಸಂಸ್ಥೆಯ ಪದಾಧಿಕಾರಿಗಳು, ಗ್ರಾಮಸ್ಥರು ಶ್ರೀಮಠದ ಸಂಸಾರ ಶಿಬಿರದ ವಿದ್ಯಾರ್ಥಿಗಳುಭಾಗವಹಿಸಿದ್ದರು

# ಭೀಮಾ ಮಿಷನ್ ಅಧ್ಯಯನ ತಂಡದ ಎರಡು ತಿಂಗಳ ಯಾತ್ರೆಯ ಆಘಾತಕಾರಿ ವರದಿ ಸಿದ್ಧ ಶೀಘ್ರವೇ ಸರ್ಕಾರಕ್ಕೆ ಮಂಡನೆ

ಆಳಂದ: ಕಲ್ಯಾಣ ಕರ್ನಾಟಕ ಪ್ರದೇಶದ ಕಲಬುರಗಿ, ಬೀದರ್ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೋಟ್ಯಂತರ ರೂಪಾಯಿ ವ್ಯಯಿಸಿ ನಿರ್ಮಿಸಲಾದ ಮಧ್ಯಮ ನೀರಾವರಿ ಯೋಜನೆಯ ಅಣೆಕಟ್ಟೆ ಮತ್ತು ಮುಖ್ಯ ಕಾಲುವೆಗಳು ಹಲವು ದಶಕಗಳ ಬಳಿಕವೂ ರೈತರ ಜಮೀನುಗಳಿಗೆ ಸರಿಯಾಗಿ ನೀರು ಒದಗಿಸದೇ ಇರುವ ಕಟು ವಾಸ್ತವ ಬಯಲಾಗಿದೆ.

ಕಲಬುರಗಿ, ಬೀದರ್ ಮತ್ತು ಯಾದಗಿರಿ ಶಾಶ್ವತ ನೀರಾವರಿ ಹೋರಾಟ ಸಮಿತಿಯ ಭೀಮಾ ಮಿಷನ್ ಅಡಿಯಲ್ಲಿ ನಡೆಸಲಾದ ಸುದೀರ್ಘ ಎರಡು ತಿಂಗಳ ಪಾದಯಾತ್ರೆ ಅಧ್ಯಯನ ಯಾತ್ರೆಯ ವರದಿ ಈಗ ಸಿದ್ಧಗೊಂಡಿದ್ದು, ಮೂರೂ ಜಿಲ್ಲೆಗಳ ನೀರಾವರಿ ವ್ಯವಸ್ಥೆಯಲ್ಲಿ ಆಳವಾಗಿ ಬೇರೂರಿರುವ ಲೋಪ, ದುರ್ಲಕ್ಷ್ಯ ಮತ್ತು ಇಚ್ಛಾಶಕ್ತಿಯ ಕೊರತೆ ನಗ್ನ ಸತ್ಯವನ್ನು ವರದಿ ಹೊರಹಾಕಿದೆ.

ನಿಸ್ವಾರ್ಥ ಅಧ್ಯಯನ ತಂಡದ ಕಾರ್ಯ:

ಹಿರಿಯ ಹೋರಾಟಗಾರ ಮತ್ತು ಭೀಮಾ ಮಿಷನ್‌ನ ರೂವಾರಿ ಭೀಮಶೆಟ್ಟಿ ಮುಕ್ಕಾ ಅವರ ನೇತೃತ್ವದಲ್ಲಿ, ಹಿರಿಯ ಆರ್ಥಿಕ ತಜ್ಞ ಡಾ. ಬಸವರಾಜ ಕಮನೂರ ಮತ್ತು ಸಂಗಾತಿಗಳಾದ ಶಿವಶರಣಪ್ಪ ಟೆಂಗಳಿ, ರಾಜು ಜೈನ್, ಶಿವರಾಜ ಬಿರಾದಾರ, ಅಭಿ ಹಾಗೂ ಮಹೇಶ ಪಾಟೀಲ, ಪ್ರಿಯಾ ಹೊಸಗೌಡ ಒಳಗೊಂಡ ತಂಡವು ಯಾವುದೇ ಸರ್ಕಾರಿ ನೆರವಿಲ್ಲದೆ ಸ್ವಯಂಪ್ರೇರಣೆಯಿಂದ ಎರಡು ತಿಂಗಳ ಕಾಲ ಮೂರೂ ಜಿಲ್ಲೆಗಳ ಅಣೆಕಟ್ಟೆ, ಮುಖ್ಯ ಕಾಲುವೆ ಮತ್ತು ವಿತರಣಾ ಕಾಲುವೆಗಳನ್ನು ಪ್ರತ್ಯಕ್ಷ ತಪಾಸಣೆ ನಡೆಸಿ ಸ್ಥಳೀಯ ರೈತರ ಸಮಸ್ಯೆಗಳನ್ನು ಆಲಿಸಿ, ಅಂಕಿ ಅಂಶಗಳ ಸಂಗ್ರಹಿಸಿ ಸಮಗ್ರ ವರದಿ ಸಿದ್ಧಪಡಿಸಿದ್ದಾರೆ. ಇಂತಹ ನಿಸ್ವಾರ್ಥ ಸೇವೆ ಈ ಭಾಗದ ರೈತರ ನಿಜವಾದ ನೋವನ್ನು ದಾಖಲಿಸಿ ಸರ್ಕಾರದ ಮುಂದಿಡುವ ಮಹತ್ವದ ಕೆಲಸ ಮಾಡಿದೆ ಎಂದು ಸ್ಥಳೀಯ ಜನ ಶ್ಲಾಘಿಸುವಂತಾಗಿದೆ. ಏನಿದೆ ಕಲ್ಯಾಣ ಕರ್ನಾಟಕದ ನೀರಾವರಿ ಯೋಜನೆಗಳ ವಾಸ್ತವ? ಕಲ್ಯಾಣ ಕರ್ನಾಟಕದ ಮೂರು ಜಿಲ್ಲೆಗಳಲ್ಲಿ ಒಟ್ಟು 11 ಮಧ್ಯಮ ನೀರಾವರಿ ಯೋಜನೆಗಳು ಕಾರ್ಯನಿರ್ವಹಿಸುತ್ತಿವೆ. ಅವು ಈ ಕೆಳಗಿನಂತಿವೆ: ಕಲಬುರಗಿ ಜಿಲ್ಲೆ: ಅಫಜಲಪೂರ ತಾಲೂಕಿನ ಭೀಮಾ ಏತ ನೀರಾವರಿ, ಆಳಂದದ ಅಮರ್ಜಾ, ಕಮಲಾಪೂರ ಮುಲ್ಲಾಮರಿ ಕೆಳದಂಡೆ, ಗಂಡೋರಿ ನಾಲಾ, ಬೆಣ್ಣೆತೋರಾ, ಚಿಂಚೋಳಿ ತಾಲ್ಲೂಕಿನ ಚಂದ್ರಂಪಳ್ಳಿ ಬೀದರ್ ಜಿಲ್ಲೆ: ಚುಳಕಿ ನಾಲಾ, ಕಾರಾಂಜಾ, ಮುಲ್ಲಾಮರಿ ಮೇಲ್ದಂಡೆ ಯಾದಗಿರಿ ಜಿಲ್ಲೆ: ಸೌದಾಗರ್, ಹತ್ತಿಗುಣಿ ಅಣೆಕಟ್ಟೆಗಳು

ಈ ಎಲ್ಲಾ ಯೋಜನೆಗಳೂ ತಮ್ಮ ನಿಗದಿತ ಸಾಮರ್ಥ್ಯಕ್ಕೆ ತಕ್ಕಂತೆ ಕಾರ್ಯ ನಿರ್ವಹಿಸುತ್ತಿಲ್ಲ ಎಂಬುದು ಅಧ್ಯಯನ ತಂಡದ ಕಟು ಅಭಿಪ್ರಾಯ. ಭೀಮಾ ಏತ ನೀರಾವರಿ 49,000 ಎಕರೆ ಗುರಿ, ಕೇವಲ 20% ಮಾತ್ರ ಫಲ! ಭೀಮಾ ಏತ ನೀರಾವರಿ ಯೋಜನೆಯಡಿ ಸುಮಾರು 49,000 ಎಕರೆ ಜಮೀನಿಗೆ ನೀರಾವರಿ ಕಲ್ಪಿಸಬೇಕಿತ್ತು. ಆದರೆ ವಾಸ್ತವದಲ್ಲಿ ಕೇವಲ ಶೇ. 20ರಷ್ಟು ಮಾತ್ರ ನೀರು ಬಳಕೆಯಾಗುತ್ತಿದೆ. ಚಂದ್ರಂಪಳ್ಳಿ ಅಣೆಕಟ್ಟೆಯಲ್ಲೂ ಇದೇ ಪರಿಸ್ಥಿತಿ ಇದ್ದು, ಶೇ. 20 ಬಳಕೆ ಮಾತ್ರ ನಡೆಯುತ್ತಿದೆ ಎಂದು ತಂಡ ಬಹಿರಂಗಪಡಿಸಿದೆ. ಅಣೆಕಟ್ಟೆಗಳ ದುಃಸ್ಥಿತಿ: ಕಟ್ಟಿದ್ದು ಅಭಿವೃದ್ಧಿಗೋ, ನಿರ್ಲಕ್ಷ್ಯಕ್ಕೋ?

ಅಧ್ಯಯನ ತಂಡ ಸ್ಥಳ ಪರಿಶೀಲನೆ ನಡೆಸಿದಾಗ ಕಂಡುಬಂದ ಸಮಸ್ಯೆಗಳು ಹೀಗಿವೆ: ಕಾಲುವೆಗಳು ಮಣ್ಣು, ಗಿಡಗಂಟಿ ಮತ್ತು ಹುಲ್ಲಿನಿಂದ ತುಂಬಿ ಹೋಗಿ ನೀರು ಹರಿಯಲು ಅಸಾಧ್ಯವಾಗಿದೆ.

# ಕಲಬುರಗಿಯಲ್ಲಿ ನೋವಾ ಐವಿಎಫ್ ಫರ್ಟಿಲಿಟಿ ಕ್ಲಿನಿಕ್ ಪ್ರಾರಂಭ

ಕಲಬುರಗಿ:ಭಾರತದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಫರ್ಟಿಲಿಟಿ ಸರಣಿಗಳಲ್ಲಿ ಒಂದಾದ ನೋವಾ ಐವಿಎಫ್ ಫರ್ಟಿಲಿಟಿ ಕಲಬುರಗಿಯಲ್ಲಿ ತನ್ನ ಹೊಸ ಕೇಂದ್ರ ಪ್ರಾರಂಭಿಸುವ ಮೂಲಕ ಕರ್ನಾಟಕಕ್ಕೆ ವಿಸ್ತರಿಸಿದೆ. ಈ ಫರ್ಟಿಲಿಟಿ ಸರಣಿಯು ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಮಂಗಳೂರು, ಶಿವಮೊಗ್ಗ, ದಾವಣಗೆರೆಯಲ್ಲಿದೆ ಮತ್ತು ಈಗ ಕಲಬುರಗಿ ಪ್ರವೇಶಿಸಿದ್ದು ಆಧುನಿಕ ಫರ್ಟಿಲಿಟಿ ಆರೈಕೆಯನ್ನು ರಾಜ್ಯದಾದ್ಯಂತ ಲಭ್ಯವಾಗುವಂತೆ ಮಾಡುತ್ತಿದೆ.ನೋವಾ ಐವಿಎಫ್ ಫರ್ಟಿಲಿಟಿ ಸಿಇಒ ಶೋಭಿತ್ ಅಗರ್ವಾಲ್, ಕಲಬುರಗಿಯಲ್ಲಿ ನಮ್ಮ ಹೊಸ ಕೇಂದ್ರದ ಪ್ರಾರಂಭದಿಂದ ದಂಪತಿಗಳು ಫರ್ಟಿಲಿಟಿ ಚಿಕಿತ್ಸೆಗೆ ದೊಡ್ಡ ನಗರಗಳಿಗೆ ಪ್ರಯಾಣಿಸುವ ಅಗತ್ಯವಿಲ್ಲ. ನೋವಾ ಐವಿಎಫ್ ಫರ್ಟಿಲಿಟಿಯಲ್ಲಿ ನಾವು ಸುಧಾರಿತ ಐವಿಎಫ್ ಲ್ಯಾಬ್‌ಗಳು ಮತ್ತು ಅನುಭವಿ ಫರ್ಟಿಲಿಟಿ ತಜ್ಞರ ಮೂಲಕ ದಂಪತಿಗಳಿಗೆ ಅವರದೇ ಅಂಡಾಣು ಮತ್ತು ವೀರ್ಯಾಣುಗಳಿಂದ ಗರ್ಭಧಾರಣೆ ಆಗುವಂತೆ ನೆರವಾಗುತ್ತೇವೆ. ನೋವಾ ಐವಿಎಫ್‌ನಲ್ಲಿ ನಾವು ಎಲ್ಲಿ ವೈದ್ಯಕೀಯವಾಗಿ ಸಾಧ್ಯವಿದೆಯೋ ದಂಪತಿಗಳದೇ ಅಂಡಾಣುಗಳು ಮತ್ತು ವೀರ್ಯಾಣುಗಳ ಬಳಕೆಯನ್ನು ದೃಢೀಕರಿಸುತ್ತೇವೆ' ಎಂದರು. ಈ ಪ್ರಾರಂಭೋತ್ಸವದಲ್ಲಿ ಕಲಬುರಗಿ ನೋವಾ ಐವಿಎಫ್ ಫರ್ಟಿಲಿಟಿಯ ಫರ್ಟಿಲಿಟಿ ತಜ್ಞರು ಪ್ರಾದೇಶಿಕ ಬಂಜೆತನದ ಪ್ರವೃತ್ತಿಗಳ ಕುರಿತು ಒಳನೋಟಗಳನ್ನು ಹಂಚಿಕೊಂಡರು. ಸುಮಾರು ಶೇ. 30ರಿಂದ 40ರಷ್ಟು ಮಹಿಳೆಯರು ಪಾಲಿಸಿಸ್ಟಿಕ್ ಓವರಿ ಸಿಂಡ್ರೋಮ್ ನಿಂದ (ಪಿಸಿಓಎಸ್) ಬಳಲುತ್ತಿದ್ದು ಇದು ಹಾರ್ಮೋನ್ ಸಮಸ್ಯೆಯಾಗಿದ್ದು ಸಾಮಾನ್ಯವಾಗಿ ಮಹಿಳೆಯರು ಅನಿಯಮಿತ ಋತುಚಕ್ರ, ಮುಖದಲ್ಲಿ ಹೆಚ್ಚಿನ ಕೂದಲು ಮತ್ತು ಮೊಡವೆ ಸಮಸ್ಯೆಯನ್ನು ಎದುರಿಸುತ್ತಾರೆ. ಇದು ಅತಿಯಾದ ತೂಕದ ಅಥವಾ ತೆಳ್ಳಗಿನ ಮಹಿಳೆಯರಲ್ಲೂ ಉಂಟಾಗಬಹುದು. ಹೆಚ್ಚುವರಿಯಾಗಿ ಶೇ. 20ರಿಂದ ಶೇ. 30ರಷ್ಟು ಬಂಜೆತನದ ಪ್ರಕರಣಗಳು ಪುರುಷರ ಬಂಜೆತನಕ್ಕೆ ಸಂಬಂಧಿಸಿದ್ದು ಅದರಲ್ಲಿ ಕಡಿಮೆ ವೀರ್ಯಾಣು ಸಂಖ್ಯೆ ಮತ್ತು ಕಡಿಮೆ ವೀರ್ಯಾಣು ಗುಣಮಟ್ಟ ಹೊಂದಿರುತ್ತವೆ. ಕಲಬುರಗಿಯ ನೋವಾ ಐವಿಎಫ್ ಫರ್ಟಿಲಿಟಿಯ ಫರ್ಟಿಲಿಟಿ ಸ್ಪೆಷಲಿಸ್ಟ್ ಡಾ. ಸುಪ್ರಿಯಾ ಜಮಖಂಡಿ,ನಾವು ಗಮನಿಸಿದ ಪ್ರಮುಖ ಸವಾಲುಗಳಲ್ಲಿ ಒಂದೆಂದರೆ ವೈದ್ಯರನ್ನು ತಡವಾಗಿ ಸಂಪರ್ಕಿಸುವುದು. ಬಹಳಷ್ಟು ದಂಪತಿಗಳು ಗರ್ಭಧಾರಣೆಗೆ 4-5 ವರ್ಷ ಪ್ರಯತ್ನಿಸಿ ನಂತರ ವೈದ್ಯಕೀಯ ನೆರವು ಕೋರುತ್ತಾರೆ. ಪತಿ ಹಾಗೂ ಪತ್ನಿಯರು ಏಕಕಾಲಕ್ಕೆ ಪರೀಕ್ಷೆಗೆ ಒಳಪಡಬೇಕು, ಏಕೆಂದರೆ ಸಮಸ್ಯೆ ಒಬ್ಬರಲ್ಲಿ ಅಥವಾ ಇಬ್ಬರಲ್ಲಿಯೂ ಇರಬಹುದು. ಎಲ್ಲ ದಂಪತಿಗಳಿಗೂ ಐವಿಎಫ್ ಅಗತ್ಯವಿಲ್ಲ. ವಯಸ್ಸಾದಂತೆ ಅಂಡಾಣುಗಳು ಮತ್ತು ವೀರ್ಯಾಣುಗಳ ಗುಣಮಟ್ಟ ಕುಸಿಯುವುದರಿಂದ ಫರ್ಟಿಲಿಟಿ ತಜ್ಞರು ಮೊದಲೇ ಪರೀಕ್ಷಿಸಿದರೆ ಫಲಿತಾಂಶಗಳನ್ನು ಗಮನಾರ್ಹವಾಗಿ ಸುಧಾರಿಸಬಹುದು. ನೋವಾ ಐವಿಎಫ್ ನಲ್ಲಿ ನಾವು ನಿಮ್ಮದೇ ಅಂಡಾಣುಗಳು ಮತ್ತು ವೀರ್ಯಾಣುಗಳಿಂದ ಗರ್ಭಧಾರಣೆಗೆ ಪ್ರಾಮುಖ್ಯತೆ ನೀಡುತ್ತೇವೆ. ಐವಿಎಫ್ ಎನ್ನುವುದು ಅತ್ಯಂತ ಸುರಕ್ಷಿತ ಚಿಕಿತ್ಸೆಯಾಗಿದೆ ಮತ್ತು ನಾವು ವೀರ್ಯಾಣುಗಳು ಮತ್ತು ಅಂಡಾಣುಗಳು ಸಂಯೋಜನೆ ಹೊಂದುವಂತೆ ಮಾಡಲು ಹಲವಾರು ಪ್ರಕ್ರಿಯೆಗಳು, ತಂತ್ರಜ್ಞಾನಗಳು ನಮ್ಮಲ್ಲಿವೆ' ಎಂದರು.

ಅನಾರೋಗ್ಯಕರ ಆಹಾರ ಪದ್ಧತಿ (ಜಂಕ್ ಫುಡ್), ವ್ಯಾಯಾಮದ ಕೊರತೆ, ಅತಿಯಾದ ತೂಕ ಅಥವಾ ಬೊಜ್ಜು ಹಾಗೂ ಧೂಮಪಾನ ಮತ್ತು ಮದ್ಯಪಾನ ಸೇವನೆ ಅಂತಹ ತಪ್ಪು ಜೀವನಶೈಲಿ ಅಭ್ಯಾಸಗಳು ಈ ಪ್ರದೇಶದಲ್ಲಿ ಬಂಜೆತನಕ್ಕೆ ಕಾರಣವಾಗಿರಬಹುದು.

ಇತ್ತೀಚಿನ ದಿನಗಳಲ್ಲಿ ಬಂಜೆತನದ ಸಮಸ್ಯೆಗಳು ಯುವ ದಂಪತಿಗಳಲ್ಲೂ ಕಾಣುತ್ತಿರುವುದು, ಇದು ಬರೀ ವಯಸ್ಸಾದ ದ0ಪತಿಗಳ ಸಮಸ್ಯೆ ಎಂಬುದನ್ನು ಹುಸಿಯಾಗಿಸಿದೆ.

# ಮೋದಿ ಷಾ ಅಬ್ಬರಕ್ಕೆ ಮಮತಾ ಬ್ಯಾನರ್ಜಿ ಸರ್ಕಾರ ಧೂಳಿಪಟ; ರಾಠೋಡ

ಚಿತ್ತಾಪುರ: ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಅವರ ಅಬ್ಬರಕ್ಕೆ ಸರ್ವಾಧಿಕಾರಿಯಂತೆ ಮೆರೆಯುತ್ತಿರುವ ಪಕ್ಷಿಮ ಬಂಗಾಳದ ಮಮತಾ ಬ್ಯಾನರ್ಜಿ ಸರ್ಕಾರ ಧೂಳಿಪಟವಾಗಿದೆ ಎಂದು ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಮಣಿಕಂಠ ರಾಠೋಡ ಹೇಳಿದರು.

ಪಟ್ಟಣದ ಲಾಡ್ಜಿಂಗ್ ಕ್ರಾಸ್ ಹತ್ತಿರ ಪಕ್ಷಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಬಹುಮತ ಪಡೆದ ಪ್ರಯುಕ್ತ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ವಿಜಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪಕ್ಷಿಮ ಬಂಗಾಳ ರಾಜ್ಯದಲ್ಲಿ ಬಿಜೆಪಿ ಕಾರ್ಯಕರ್ತರು ಯಾರಿಗೂ ಎದೆ ಗುಂದದೆ ಧೈರ್ಯದಿಂದ ಚುನಾವಣೆ ಮಾಡಿದ್ದರಿಂದ 15 ವರ್ಷದ ಮಮತಾ ಬ್ಯಾನರ್ಜಿ ಆಡಳಿತ ಧೂಳಿಪಟವಾಗಿದೆ, ಅದರಂತೆ ಚಿತ್ತಾಪುರ ಕ್ಷೇತ್ರದಲ್ಲೂ ಯಾರಿಗೂ ಹೆದರುವುದು ಹಾಗೂ ಎದೆ ಗುಂದುವುದು ಅವಶ್ಯಕತೆ ಇಲ್ಲ ಧೈರ್ಯದಿಂದ ಇರಿ, ಬಿಜೆಪಿ ವಿಶ್ವದಲ್ಲೇ ದೊಡ್ಡ ಪಕ್ಷವಾಗಿದೆ ಹೀಗಾಗಿ ಯಾರಿಂದಲೂ ಏನು ಮಾಡುವುದಕ್ಕೆ ಆಗುವುದಿಲ್ಲ ಎಂದು ಹೇಳಿದರು.ಬಿಜೆಪಿಯವರು ರಸ್ತೆ ಮೇಲೆ ಓಡಾಡದಂತೆ ಮಾಡಲಾಗುವುದು ಹಾಗೂ ಆರ್'ಎಸ್ಎಸ್ ಪಥ ಸಂಚಲನ ನಡೆಯುವುದಕ್ಕೆ ಬಿಡುವುದಿಲ್ಲ ಎಂದು ಹೇಳಿದ್ದರು. ಆದರೆ ಅದ್ದೂರಿಯಾಗಿ ನಡೆಯಿತು. ಇಡೀ ದೇಶ ತಿರುಗಿ ನೋಡುವಂತಾಯಿತು ಎಂದರು.

ಪಕ್ಷಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಎಂಬ ರಾಕ್ಷಸಿ ರೂಪದ ಸರ್ಕಾರ, ಸರ್ವಾಧಿಕಾರಿಯಾಗಿ ದಬ್ಬಾಳಿಕೆ ನಡೆಸಿ ಭಯದ ವಾತಾವರಣ ನಿರ್ಮಾಣವಾಗಿತ್ತು. ಇದಕ್ಕೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಅವರು ಸಮರ್ಥವಾಗಿ ಎದುರಿಸುವ ಮೂಲಕ ಬಿಜೆಪಿ ಕಾರ್ಯಕರ್ತರಲ್ಲಿ ಧೈರ್ಯ ತುಂಬಿದ್ದರಿಂದ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿ ಬಹುಮತ ಪಡೆಯಲು ಸಾಧ್ಯವಾಗಿದೆ ಎಂದು ಹೇಳಿದರು.

ಪಕ್ಷಿಮ ಬಂಗಾಳದಲ್ಲಿ ಎಸ್‌ಐಆರ್ ನಡೆದಿದ್ದರಿಂದ ಸಾವಿರಾರು ಬೋಕಸ್ ಮತಗಳು ರದ್ದಾಗಿದ್ದು ರಾಕ್ಷಸಿ ಸರ್ಕಾರ ಧೂಳಿಪಟವಾಗಿದೆ, ಚಿತ್ತಾಪುರ ಕ್ಷೇತ್ರದಲ್ಲಿಯೂ ಎಸ್‌ಐಆರ್ ಆಗಲಿದ್ದು 18 ಸಾವಿರ ಬೋಕಸ್ ಮತಗಳು ಕಟ್ ಆಗಲಿವೆ, ಆಗ ಇಲ್ಲಿಯೂ ಕಾಂಗ್ರೆಸ್ ಧೂಳಿಪಟ ಆಗಲಿದೆ ಎಂದು ಹೇಳಿದರು.

ಬರುವ ದಿನಗಳಲ್ಲಿ ಇಲ್ಲಿನ ಶಾಸಕರಿಗೆ ಭವಿಷ್ಯ ಇಲ್ಲ ಸುಮ್ಮನೆ ಅವರ ಹಿಂದೆ ಓಡಾಡಬೇಡಿ, ತಮ್ಮ ಕೆಲಸ ಕಾರ್ಯಗಳಿಗಾಗಿ ನಮ್ಮವರೇ ಕೆಲವರು ಅವರಿಗೆ ಭೇಟಿ ನೀಡಿ ಫೋಟೋ ಶೂಟ್ ಮಾಡುತ್ತಿದ್ದಾರೆ, ಇದೆಲ್ಲ ನಮ್ಮ ಪಕ್ಷದ ನಾಯಕರು ಗಮನ ಹರಿಸುತ್ತಿದ್ದಾರೆ ಎಂದು ಹೇಳಿದರು. ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಗಿರೀಶ್ ಭಜಂತ್ರಿ, ಪುರಸಭೆ ಮಾಜಿ ಸದಸ್ಯ ಶಾಮ್ ಮೇಧಾ, ನ್ಯಾಯವಾದಿ ಅಶ್ವಥ್ ರಾಠೋಡ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರಾಧ್ಯಕ್ಷ ಆನಂದ ಪಾಟೀಲ ನರಿಬೋಳ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ನಾಗರಾಜ ಹೂಗಾರ, ಮಲ್ಲಿಕಾರ್ಜುನ ಇಟಗಿ, ಯುವ ಅಧ್ಯಕ್ಷ ದೇವರಾಜ್ ತಳವಾರ, ಮುಖಂಡರಾದ ಶ್ರೀಕಾಂತ್ ಸುಲೇಗಾಂವ, ಬಸವರಾಜ ಸಂಕನೂರ, ರಮೇಶ್ ಣಮಬೊಮ್ಮನಳ್ಳಿ, ಪ್ರಭು ಗಂಗಾಣಿ, ಪಂಕಜ್ ಗೌಡ್, ಸುರೇಶ್ ಬೆನಕನಳ್ಳಿ, ಬಸವರಾಜ ಹೂಗಾರ, ಶರಣಪ್ಪ ಸಣಮೋ, ಕಾಶಿನಾಥ ಸಣಮೋ, ಆನಂದ ಕಾಶಿ, ಶರಣು ತೊನಸನಳ್ಳಿ, ಸಾಗರ ಚವ್ಹಾಣ, ಶಿವರಾಮ್ ಚವ್ಹಾಣ, ರಮೇಶ್ ಕಾಳನೂರ, ಸುನೀಲ್ ಚವ್ಹಾಣ, ಸಂಜಯ್ ರಾಠೋಡ, ಗೂಳಿ ಡಿಗ್ಗಿ ಸೇರಿದಂತೆ ಇತರರು ಇದ್ದರು.

ಬಿಜೆಪಿ ಮುಖಂಡರು ಜೈ ಘೋಷಗಳು ಕೂಗಿ ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು.

# ವಂದೇ ಭಾರತ ರೈಲು ಸಂಚಾರ ಕುರಿತು ಅಪಪ್ರಚಾರ ಬೇಡ : ಸಂಸದರು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಂದೇ ಭಾರತ ರೈಲು ಸಂಚಾರ ವಿಜಯಪುರದಲ್ಲಿ ಸಂಚರಿಸಲು ಜಿಲ್ಲೆಯ ಸಾರ್ವಜನಿಕರ ಬಹುದಿನಗಳ ಬೇಡಿಕೆಯಾಗಿದ್ದು, ಗುಲ್ಬರ್ಗಾ, ಹುಬ್ಬಳ್ಳಿ, ಬೆಳಗಾವಿಯಲ್ಲಿ ಸದ್ಯ ರೈಲು ಸಂಚರಿಸುತ್ತಿದೆ. ಆದರೆ ವಸ್ತುಸ್ಥಿತಿ ಸಾರ್ವಜನಿಕರು ಅರ್ಥ ಮಾಡಿಕೊಳ್ಳಬೇಕು. ಸೊಲ್ಲಾಪುರ, ಬಿಜಾಪುರ, ಗದಗ, ಹುಬ್ಬಳ್ಳಿಯವರೆಗೆ ರೈಲು ಮಾರ್ಗ ಕಾಮಗಾರಿ ಪೂರ್ಣಗೊಂಡಿರುವುದಿಲ್ಲ. ಸದ್ಯ ಓಡುತ್ತಿರುವ ರೈಲಿನ ವೇಗವು 92 ರಿಂದ 100 ರವರೆಗೆ ಇರುತ್ತದೆ. ಆದರೆ ವಂದೇ ಭಾರತ ರೈಲಿನ ವೇಗ 110 ರಿಂದ 140ರ ವೇಗವಾಗಿದೆ. ಆದ ಕಾರಣ ರೈಲಿನ ಮಾರ್ಗ ಕಾಮಗಾರಿಯಲ್ಲಿದ್ದು, ಈ ರೈಲು ಚಾಲನೆಯಾದರೆ ಏನಾದರೂ ಸಮಸ್ಯೆಯಾಗಬಾರದೆಂಬ ಹಿನ್ನೆಲೆ ವಂದೇ ಭಾರತ ರೈಲು ಸಂಚಾರ ಮಾಡುವುದು ವಿಳಂಬವಾಗುತ್ತಿದೆ. ರೈಲು ಮಾರ್ಗ 2-3 ತಿಂಗಳಲ್ಲಿ ಪೂರ್ಣಪ್ರಮಾಣದಲ್ಲಿ ಕಾಮಗಾರಿ ಮುಗಿದ ನಂತರ ಈ ರೈಲು ಸಂಚರಿಸಲು ಚಾಲನೆಯಾಗುತ್ತದೆ. ವಿದ್ಯಾವಂತರು ಇದನ್ನು ಅರಿತುಕೊಳ್ಳಬೇಕು. ಯಾವುದೇ ರೀತಿಯ ದ್ವಂಧಕ್ಕೆ ಅಂಟಿಕೊಳ್ಳದೇ ರೈಲಿನ ಕುರಿತು ಅಪಪ್ರಚಾರ ಮಾಡಬಾರದು ಎಂದು ಲೋಕಸಭಾ ಸದಸ್ಯರಾದ ರಮೇಶ ಜಿಗಜಿಣಗಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಮೇ 11 ರಿಂದ ಅಲರ್ಜಿ, ಅಸ್ತಮಾ, ಕೆಮ್ಮು, ದಮ್ಮು ರೋಗಕ್ಕೆ ಉಚಿತ ತಪಾಸಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಕಾಯಚಿಕಿತ್ಸೆ ವಿಭಾಗದ ವತಿಯಿಂದ ಅಲರ್ಜಿ, ಅಸ್ತಮಾ, ಕೆಮ್ಮು, ದಮ್ಮು ಹಾಗೂ ದೀರ್ಘಕಾಲದ ಉಸಿರಾಟ ಇಂತಹ ಸಮಸ್ಯೆ ಕುರಿತು ಉಚಿತ ತಪಾಸಣೆ ಶಿಬಿರ ಮೇ 11 ರಿಂದ ಮೇ 14ರ ವರೆಗೆ ನಡೆಯಲಿದೆ.

ಸೋಮವಾರದಿಂದ ಗುರವಾರದ ವರೆಗೆ ನಾಲ್ಕು ದಿನ ನಡೆಯಲಿರುವ ಈ ಶಿಬಿರವನ್ನು ಸಮಸ್ಯೆ ಎದುರಿಸುತ್ತಿರುವ ಸಾರ್ವಜನಿಕರು ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಬಿ.ಎಲ್.ಡಿ.ಇ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ- 9513397413 ಸಂಪರ್ಕಿಸಬಹುದಾಗಿದೆ.

# ಕುಡಿವ ನೀರಿಗಾಗಿ ಉಜನಿ ಜಲಾಶಯದಿಂದ ನೀರು ಬಿಡುಗಡೆ



■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಬೇಸಿಗೆ ಆರಂಭವಾಗುತ್ತಿದ್ದಂತೆ ಭೀಮಾ ನದಿ ಬತ್ತಿ ಹೋಗಿ, ಪಶು-ಪಕ್ಷಿ, ಜನ-ಜಾನುವಾರುಗಳಿಗೆ ನೀರಿನ ಹಾಹಾಕಾರ ಉಲ್ಬಣಗೊಂಡಿತ್ತು. ಈ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಸರ್ಕಾರ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಉಜನಿ ಜಲಾಶಯದಿಂದ ನೀರು ಬಿಡುಗಡೆ ಮಾಡಿದೆ. ಪಂಡರಪುರ ಹಾಗೂ ಸೊಲ್ಲಾಪುರ ನಗರಗಳಿಗೆ ಕುಡಿಯುವ ನೀರಿನ ಪೂರೈಕೆಗಾಗಿ ಭೀಮಾ ನದಿಗೆ ನೀರು ಹರಿಸಿದೆ.

ಇದರಿಂದ ಕರ್ನಾಟಕದ ಇಂಡಿ, ಆಲಮೇಲ, ಅಫಜಲಪುರ, ಯಾದಗಿರಿ, ಗುಲ್ಬರ್ಗ, ರಾಯಚೂರು ನಗರಗಳ ಭೀಮಾತೀರದ ಗ್ರಾಮಗಳಿಗೆ ಕುಡಿಯುವ ನೀರಿನ ಅನುಕೂಲವಾಗಲಿದೆ.

ಬಿಸಲಿನ ಬೇಗೆಯಿಂದ ತತ್ತರಿಸಿ ಹೋಗಿದ್ದ ಪಶು-ಪಕ್ಷಿ, ಜನ-ಜಾನುವಾರುಗಳು ಸ್ವಲ್ಪ ನಿಟ್ಟುಸಿರು ಬಿಡುವಂತಾಗಿದೆ.

# ವ್ಯವಸ್ಥಿತ & ಅರ್ಥಪೂರ್ಣವಾಗಿ ನಡೆದ ಬೀದರ ಸಮ್ಮೇಳನ

## ಬೀದರನಲ್ಲಿ ನಡೆದ ರಾಜ್ಯ ಪತ್ರಕರ್ತರ ಸಮ್ಮೇಳನ । ಧನ್ಯವಾದ ಸಮರ್ಪಣಾ ಸಮಾರಂಭದಲ್ಲಿ । ಕೆಯುಡಬ್ಲೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಶ್ಲಾಘನೆ

■ ಉದಯರಶ್ಮಿ ದಿನಪತ್ರಿಕೆ




ಬೆಂಗಳೂರು: ಬಸವನ ನಾಡು, ಸೂಫಿ ಸಂತರ ಬೀಡು ಬೀದರನಲ್ಲಿ ಎರಡು ದಿನಗಳು ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಸಂಘಟಿಸಿ, ಯಶಸ್ವಿಗೊಳಿಸಿದ ಹಿನ್ನೆಲೆಯಲ್ಲಿ ಸಮ್ಮೇಳನದ ಯಶಸ್ವಿಗಾಗಿ ಶ್ರಮಿಸಿದವರು ಮತ್ತು ಸಹಕರಿಸಿದವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ( ಕೆಯುಡಬ್ಲೂಜೆ)ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸನ್ಮಾನಿಸಿದರು.

ಬೀದರ ಎಸ್‌ಪಿ ಗೆಸ್ಟ್ ಹೌಸ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ವಸತಿ, ಆಹಾರ, ಸಾರಿಗೆ, ಪ್ರಚಾರ, ಮೆರವಣಿಗೆ, ನೋಂದಣಿ, ಅತಿಥಿ ಸತ್ಕಾರ, ಸಾಂಸ್ಕೃತಿಕ, ಸ್ಮರಣ ಸಂಚಿಕೆ, ಮಹಿಳಾ ಸಮಿತಿಯಿಂದ ಹಿಡಿದು ವಸ್ತು ಪ್ರದರ್ಶನ, ಛಾಯಾಚಿತ್ರ ಪ್ರದರ್ಶನ ಸಮಿತಿ ತನಕ ಎಲ್ಲಾ ಉಪ ಸಮಿತಿಗಳ ಪ್ರಧಾನ ಸಂಚಾಲಕರು, ಸಂಚಾಲಕರು, ಸಹ ಸಂಚಾಲಕರ ಸೇವೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು.



ಸಮ್ಮೇಳನಕ್ಕೆ ಒಂದೊಂದು ಜವಬ್ದಾರಿ ವಹಿಸಿಕೊಂಡು ಸಹಕಾರ ನೀಡಿದವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಕಡಿಮೆ ಅವಧಿಯಲ್ಲಿ ಸಮ್ಮೇಳನವನ್ನು ವ್ಯವಸ್ಥಿತವಾಗಿ ಸಂಘಟಿಸಿದ ಬೀದರ್ ಜಿಲ್ಲಾ ಘಟಕ, ಬೀದರ್ ಪತ್ರಕರ್ತರು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಡಳಿತ ಮತ್ತು ನಾಗರೀಕರಿಗೆ ಧನ್ಯವಾದ ತಿಳಿಸಿದರು.

ಸಮ್ಮೇಳನದ ಮೆರವಣಿಗೆಯಿಂದ ಹಿಡಿದು ಊಟೋಪಚಾರ ತನಕ, ಸಮ್ಮೇಳನದ ಉದ್ಘಾಟನೆಯಿಂದ ಹಿಡಿದು ಹಲವು ವಿಚಾರ ಗೋಷ್ಠಿಗಳು, ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಮಾರೋಪ ತನಕ ಎಲ್ಲವೂ ವ್ಯವಸ್ಥಿತವಾಗಿ, ಅರ್ಥಪೂರ್ಣವಾಗಿ ನಡೆದಿವೆ ಎಂದು ತಿಳಿಸಿದರು.

ಸಮ್ಮೇಳನ ಎನ್ನುವುದು ಒಂದು ಮೆರಗು, ಸೊಬಗು. ಸಮ್ಮೇಳನದ ಆತಿಥ್ಯ ವಹಿಸಿಕೊಂಡಿದ್ದ ಬೀದರ್ ಘಟಕ ಸಮ್ಮೇಳನದ ದಿಬ್ಬಣವನ್ನು ಅಚ್ಚುಕಟ್ಟಾಗಿ, ಹಬ್ಬದ ರೂಪದಲ್ಲಿ ಸ್ವಾಗತಿಸಿ, ಸತ್ಕರಿಸಿ ಬೀಳ್ಕೊಟ್ಟಿರುವುದಕ್ಕೆ ಕೆಯುಡಬ್ಲೂಜೆ ಅಭಾರಿಯಾಗಿದೆ ಎಂದು ತಗಡೂರು ಹೇಳಿದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ, ಸಚಿವ ರಹೀಂಖಾನ್ ಸೇರಿದಂತೆ ಎಲ್ಲಾ ಶಾಸಕರು ಮತ್ತು ಜನಪ್ರತಿನಿಧಿಗಳು ಮತ್ತು ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಸೇರಿದಂತೆ ಎಲ್ಲ ತಾಲೂಕು ಸಂಘಗಳಿಗೂ ರಾಜ್ಯ ಸಂಘ ಅಭಾರಿಯಾಗಿದೆ ಎಂದು ಶಿವಾನಂದ್ ಹೇಳಿದರು.

ಬೀದರ್ ಜಿಲ್ಲಾ ಘಟಕ ಅಧ್ಯಕ್ಷ ಆನಂದ ದೇವಪ್ಪ ಮಾತನಾಡಿ, ರಾಜ್ಯ ಸಂಘದ ಅಧ್ಯಕ್ಷರು ನಮ್ಮ ಮೇಲೆ ವಿಶ್ವಾಸವಿಟ್ಟು ಸಮ್ಮೇಳನವನ್ನು ನೀಡಿ, ಸಹಕಾರ ಮಾಡಿದ್ದನ್ನು ಎಂದೂ ಮರೆಯಲು ಸಾಧ್ಯವಿಲ್ಲ. ಹಾಗೆಯೇ ಸಮ್ಮೇಳನಕ್ಕಾಗಿ ದುಡಿದವರಿಗೆ ಹೃದಯಪೂರ್ವಕವಾದ ಧನ್ಯವಾದ ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಮಾತನಾಡಿ, ರಾಜ್ಯ ಸಂಘದ ಪರವಾಗಿ ಧನ್ಯವಾದ ಸಲ್ಲಿಸಿದರು.

ಕಲಬುರ್ಗಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ, ಕೆಯುಡಬ್ಲೂಣಟಿಜಜಜಿಟಿಜಜಜೆ ರಾಜ್ಯ ಸಮಿತಿ ಸದಸ್ಯರಾದ ಭವಾನಿಸಿಂಗ್ ಠಾಕೂರ್ ಮತ್ತಿತರರು ಉಪಸ್ಥಿತರಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಗುರುದ್ವಾರದ ಮುಖ್ಯಸ್ಥರು ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

ರಾಜ್ಯ ಸಮಿತಿ ಸದಸ್ಯ ಅಪ್ಪರಾವ್ ಸೌದಿ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಸಮ್ಮೇಳನವನ್ನು ಯಶಸ್ವಿಗೊಳಿಸಿದ ಬೀದರ್ ಜಿಲ್ಲಾ ಘಟಕ ಅಧ್ಯಕ್ಷ ಆನಂದ ದೇವಪ್ಪ ಅವರನ್ನು ರಾಜ್ಯ ಸಂಘದ ಪರವಾಗಿ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸನ್ಮಾನಿಸಿದರು

# ದಿನದಿಂದ ದಿನಕ್ಕೆ ಏರುತ್ತಲೇ ಇರುವ ಸೂರ್ಯನ ತಾಪಮಾನ।

## ಕಸುಬು ನಂಬಿದ ಕುಟುಂಬಗಳ ಮೊಗದಲ್ಲಿ ಮಂದಹಾಸ

# ಗುಮ್ಮಟ ನಗರಿಯಲ್ಲಿ ಮಣ್ಣಿನ ಮಡಿಕೆಗೆ ಭರ್ಜರಿ ಬೇಡಿಕೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ರತ್ನಾಂಜಲಿ ವಾಲಿಕಾರ

ವಿಜಯಪುರ: ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಸೂರ್ಯನ ತಾಪಮಾನ ಏರುತ್ತಲೇ ಇದೆ. ಬಿರು ಬೇಸಿಗೆಯ ದಾಹ ನೀಗಿಸಿಕೊಳ್ಳಲು ಸಾರ್ವಜನಿಕರು ಈಗ ನೈಸರ್ಗಿಕವಾದ 'ಮಣ್ಣಿನ ಮಡಿಕೆ'ಗಳ ಮೊರೆ ಹೋಗುತ್ತಿದ್ದಾರೆ. ಇದರಿಂದಾಗಿ ಮಣ್ಣಿನ ಮಡಿಕೆಗಳ ವ್ಯಾಪಾರ ವಹಿವಾಟು ಜೋರಾಗಿದ್ದು, ಈ ಕಸುಬು ನಂಬಿದ ಕುಟುಂಬಗಳ ಮೊಗದಲ್ಲಿ ಮಂದಹಾಸ ಮೂಡಿದೆ. ಆರೋಗ್ಯಕ್ಕೆ ಮಡಿಕೆ ನೀರು ಅಮೃತ. ಮಣ್ಣಿನ ಮಡಿಕೆಯಲ್ಲಿನ ಸಣ್ಣ ರಂಧ್ರಗಳ ಮೂಲಕ ನೀರು ನಿಧಾನವಾಗಿ ಆವಿಯಾಗುವುದರಿಂದ ನೀರು ಸ್ವಾಭಾವಿಕವಾಗಿ ತಂಪಾಗುತ್ತದೆ. ಇದು ದೇಹಕ್ಕೆ ಸಮತೋಲಿತ ತಂಪನ್ನು ನೀಡುತ್ತದೆ. ಈ ನೈಸರ್ಗಿಕ ಗುಣವೇ ಜನರನ್ನು ಮಡಿಕೆಯತ್ತ ಆಕರ್ಷಿಸುತ್ತಿದೆ.

ಕುಲಕಸುಬಿಗೆ ಆರ್ಥಿಕ ಬಲ: ಮಣ್ಣಿನ ಮಡಿಕೆಗಳ ಬೇಡಿಕೆ ಕುಸಿದು ಆರ್ಥಿಕ ಸಂಕಷ್ಟದಲ್ಲಿದ್ದ ಕುಟುಂಬಗಳಿಗೆ ಈ ಬೇಸಿಗೆ ವರದಾನವಾಗಿದೆ. ಕೆಲವು ಕಡೆಗಳಲ್ಲಿ ದಿನಕ್ಕೆ ನೂರಾರು ಮಡಿಕೆಗಳು ಮಾರಾಟವಾಗುತ್ತಿದ್ದು, ಗ್ರಾಮೀಣ ಭಾಗದ ಗುಡಿ ಕೈಗಾರಿಕೆಗೆ ಹೊಸ ಚೈತನ್ಯ ಬಂದಿದೆ.

ಪರಿಸರ ಸ್ನೇಹಿ ಆಯ್ಕೆ: ಮಣ್ಣಿನ ಮಡಿಕೆಗಳು ನೈಸರ್ಗಿಕ ವಸ್ತುಗಳಿಂದ ತಯಾರಾಗುವುದರಿಂದ ಇವುಗಳಿಂದ ಪರಿಸರಕ್ಕೆ ಯಾವುದೇ ಹಾನಿಯಿಲ್ಲ. ಪ ಜಿಲ್ಲಾಡಳಿತವು ವಾಹನ ಸವಾರರಿಗಾಗಿ ನಗರದ ವಿವಿಧ ವೃತ್ತಗಳಲ್ಲಿ ನೆರಳಿನ ಹೊದಿಕೆ ನಿರ್ಮಿಸಿರುವುದು ಶ್ಲಾಘನೀಯವಾಗಿದ್ದು, ಜನರು ತಂಪು ನೀರಿಗಾಗಿ ಮಡಿಕೆಯನ್ನು ಆರಿಸಿಕೊಳ್ಳುತ್ತಿರುವುದು ಆರೋಗ್ಯಕರ ಬೆಳವಣಿಗೆಯಾಗಿದೆ.



"ಬೇಸಿಗೆ ಪ್ರಾರಂಭವಾದರೆ ಮಾತ್ರ ಮಣ್ಣಿನ ಮಡಿಕೆಗಳಿಗೆ ಭರ್ಜರಿ ಬೇಡಿಕೆ ಬರುತ್ತದೆ. ಉಳಿದ ದಿನಗಳಲ್ಲಿ ಮಾರಾಟ ಸಾಧಾರಣವಾಗಿರುತ್ತದೆ. ಈಗ ಬಿಸಿಲಿನ ಜಳ ಹೆಚ್ಚುತ್ತಿರುವುದರಿಂದ ಜನರು ಮುಗಿಬಿದ್ದು ಮಡಿಕೆಗಳನ್ನು ಖರೀದಿಸುತ್ತಿದ್ದಾರೆ. ಇದರಿಂದ ನಮ್ಮ ಜೀವನೋಪಾಯಕ್ಕೆ ಸ್ವಲ್ಪ ಆಸರೆಯಾಗಿದೆ."

■ ಮಹೇಶ ಕುಂಬಾರ ಸ್ಥಳೀಯ ಮಡಿಕೆ ಮಾರಾಟಗಾರ.

### ಹಳೆಯ ಸಂಪ್ರದಾಯಕ್ಕೆ ಮರುಜೀವ

ಹಿಂದಿನ ಕಾಲದಲ್ಲಿ ಪ್ರತಿಯೊಂದು ಮನೆಯಲ್ಲೂ ಮಣ್ಣಿನ ಮಡಿಕೆಗಳ ಬಳಕೆ ಕಡ್ಡಾಯವಾಗಿತ್ತು. ಮಣ್ಣಿನ ಪಾತ್ರೆಯ ನೀರು ಆರೋಗ್ಯಕ್ಕೆ ಹಿತಕಾರಿ ಎಂಬ ಅರಿವು ಅಂದಿನವರಿಗಿತ್ತು. ಆಧುನಿಕ ಜೀವನಶೈಲಿಯಿಂದಾಗಿ ನಡುವೆ ಮರೆಯಾಗಿದ್ದ ಈ ಸಂಪ್ರದಾಯ, ಈಗ ಮತ್ತೆ ಜೀವ ಪಡೆದಿದೆ. ರಸ್ತೆ ಬದಿಗಳಲ್ಲಿ, ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಮಣ್ಣಿನ ಮಡಿಕೆಗಳ ಮಾರಾಟದ ಸದ್ದು ಕೇಳಿಬರುತ್ತಿದೆ. ಕೇವಲ ಮನೆಗಳಿಗಷ್ಟೇ ಅಲ್ಲದೆ, ಕಚೇರಿ ಹಾಗೂ ಅಂಗಡಿ ಮುಂಗಟ್ಟುಗಳಲ್ಲೂ ಜನರು ಮಡಿಕೆಗಳನ್ನು ಇರಿಸುತ್ತಿದ್ದಾರೆ.



## ಜಿಪಂ ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ ಅಭಿಮತ

# ಹವಾಮಾನ ಬದಲಾವಣೆ ತಡೆಗಟ್ಟುವಲ್ಲಿ ಕೈಜೋಡಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಹವಾಮಾನ ಬದಲಾವಣೆ ತಡೆಗಟ್ಟುವಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಿ, ಕೆಪಿಐಗಳ ಅನುಷ್ಠಾನಕ್ಕೆ ಜಿಲ್ಲಾ ಪಂಚಾಯತಿನಿಂದ ಸಂಪೂರ್ಣ ಸಹಕಾರ ನೀಡುವುದಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಸಿ.ಬಿ. ಕುಂಬಾರ ಹೇಳಿದರು.

ಎಂಪ್ರಿ ಸಂಸ್ಥೆಯು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕ್ರಿಯಾಯೋಜನೆ(ಏಖಂಕಅಅ)ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಂಪ್ರಿ ಸಂಸ್ಥೆಯ ಸಂಶೋಧನಾ ವಿಜ್ಞಾನಿಗಳಾದ ಡಾ. ಪವಿತ್ರಾ ಪಿ. ನಾಯಕ್ ಅವರು ಮಾತನಾಡಿ, ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆ ಕುರಿತು ಸವಿಸ್ತಾರವಾಗಿ ವಿವರಣೆ ನೀಡಿದರು. ಹವಾಮಾನ ಕಾರ್ಯನೀತಿ, ಕಾರ್ಯತಂತ್ರಗಳು, ವಿವಿಧ ಇಲಾಖೆಗಳ ಪಾತ್ರ ಹಾಗೂ ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳ ಪರಿಣಾಮಗಳು ಮತ್ತು ಜಿಲ್ಲಾಸ್ಥರದ ದತ್ತಾಂಶಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಅರಣ್ಯ ಇಲಾಖೆಯ ಶಿವರುದ್ರಪ್ಪ ಕಬಾಡಗಿ ಮಾತನಾಡಿ, ವಿಜಯಪುರ ಜಿಲ್ಲೆಯಲ್ಲಿ ಇಲಾಖೆಯು ತೆಗೆದುಕೊಂಡ ಕ್ರಮಗಳ ಕುರಿತು ವಿವರಿಸಿದರು.

ಜಲ ಸಂಪನ್ಮೂಲ ವಲಯಕ್ಕೆ ಸಂಬಂಧಿಸಿದ ಹವಾಮಾನ ಕ್ರಿಯಾ ಯೋಜನೆ ಕುರಿತು ಜಲ ಸಂಪನ್ಮೂಲ ತಜ್ಞರಾದ ಡಾ. ಶಶಿಕುಮಾರ್ ಎನ್. ಸಂಕ್ಷಿಪ್ತ ಮಾಹಿತಿ ನೀಡಿದರು.

ಸಭೆಯಲ್ಲಿ ಎನ್.ಆರ್.ಡಿ.ಎಂ.ಎಸ್ ಅಧಿಕಾರಿಗಳಾದ ಚನ್ನಮ್ಮ ಕರೆಪ್ಪ, ಎಂಪ್ರಿ ಸಂಸ್ಥೆಯ, ಕುಮಾರಿ ರುಚಿತಾ ಶ್ರೀ ತರಬೇತಿ ಅಸೋಸೊಯೇಟ್ ಹಾಗೂ ತರಬೇತಿ ಸಹಾಯಕರಾದ ರಾಘವೇಂದ್ರ ಎನ್. ಸೇರಿದಂತೆ ತರಬೇತಿ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಸುಮಾರು 55 ಮಂದಿ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಣ ಸಂಸ್ಥೆಗಳ ಸದಸ್ಯರು ಹಾಗೂ ಇತರೆ ಪಾಲುದಾರರು ಭಾಗವಹಿಸಿದ್ದರು.

# ಜಮಖಂಡಿಯ ಸ್ನಾತಕೋತ್ತರ ಕೇಂದ್ರದಲ್ಲಿ ಕ್ಯಾಂಪಸ್ ಸಂದರ್ಶನ

■ ಉದಯರಶ್ಮಿ ದಿನಪತ್ರಿಕೆ




ಜಮಖಂಡಿ: ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ ಜಮಖಂಡಿಯಲ್ಲಿ ಉದ್ಯೋಗ ಭರವಸಾ ಕೋಶ, ಐಕ್ಯೂಎಸಿ. ಮ್ಯಾಗ್ನೆಸ್ ಇಂಟರ್‌ನ್ಯಾಶನಲ್ ಪ್ರೈವೇಟ್ ಲಿಮಿಟೆಡ್ ಹಾಗೂ ಪೋರ್ಟಲ್ ಹೆಚ್.ಆರ್. ಕನ್ಸಲನ್ಸಿ ಸರ್ವಿಸಸ್ ಇವರ ಸಹಯೋಗದೊಂದಿಗೆ "ಕ್ಯಾಂಪಸ್ ಸಂದರ್ಶನ" ಅನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮ್ಯಾಗ್ನೆಸ್ ಇಂಟರ್‌ನ್ಯಾಶನಲ್ ಪ್ರೈವೇಟ್ ಲಿಮಿಟೆಡ್ ಹೆಚ್.ಆರ್. ಸುಹಾಸ ಜೆ. ಇವರು ಮಾತನಾಡುತ್ತಾ, ವಿದ್ಯಾರ್ಥಿನಿಯರಿಗೆ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡಿ, ಸಂದರ್ಶನದಲ್ಲಿ ಯಶಸ್ವಿಯಾಗಲು ಅಗತ್ಯವಾದ ಕೌಶಲ್ಯಗಳು, ಆತ್ಮವಿಶ್ವಾಸ, ಸಂವಹನ ಕೌಶಲ್ಯ ಹಾಗೂ ವ್ಯಕ್ತಿತ್ವ ವಿಕಾಸದ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಸುನಂದಾ ಎಸ್. ಶಿರೂರ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಇಂತಹ ಕ್ಯಾಂಪಸ್ ಸಂದರ್ಶನ (ಡ್ರೈವ್) ಗಳು ವಿದ್ಯಾರ್ಥಿನಿಯರಿಗೆ ಉತ್ತಮ ಉದ್ಯೋಗಾವ ಕಾಶಗಳನ್ನು ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದೊಂದಿಗೆ ಕೌಶಲ್ಯಾಭಿವೃದ್ಧಿಯ ಮೇಲೂ ಗಮನಹರಿಸಿ, ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದು ಪ್ರೇರೇಪಿಸಿದರು. ಪದವಿ ಮುಗಿಸಿದ ನಂತರ ತಮ್ಮ ಸಾಮರ್ಥ್ಯಗಳಿಗೆ ಅನುಸಾರ ನೇಮಕಾತಿ ಆದೇಶವನ್ನು ನೀಡಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪೋರ್ಟಲ್ ಹೆಚ್.ಆರ್. ಕನ್ಸಲನ್ಸಿ ಸರ್ವಿಸಸ್‌ನ ಹೆಚ್. ಆರ್. ಶ್ರೀಮತಿ ಪೂಜಾ ಮತ್ತು ಶ್ರೀಮತಿ ಕಾವ್ಯಾ, ಅಮ್ಮಣ್ಣ ಕುರುಂದವಾಡ, ಶ್ರೀಮತಿ ಶಿವಲೀಲಾ ಎಚ್., ಡಾ. ಬಿ. ಎಮ್. ಕೊರಬು, ಪ್ರಭು ಅವರಾದಿ, ಶ್ರೀಮತಿ ಅನಸೂಯಾ ವಾಯ್. ಮಬ್ರುಮಕರ, ಎಸ್. ಬಿ. ತೇರದಾಳ, ಕು. ವಿನಾಯಕ ಹಿಮಕರ ಉಪಸ್ಥಿತರಿದ್ದರು.ಸದರಿ ಕ್ಯಾಂಪಸ್ ಡ್ರೈವ್‌ನಲ್ಲಿ ಸುಮಾರು 415 ವಿದ್ಯಾರ್ಥಿನಿಯರು ಭಾಗವಹಿಸಿದ್ದು, ಅವರಲ್ಲಿ 67 ವಿದ್ಯಾರ್ಥಿನಿಯರಿಗೆ ನೇಮಕಾತಿ ಆದೇಶವನ್ನು ನೀಡಲಾಯಿತು.

## ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವದ ಹಿನ್ನೆಲೆ ವಿಜಯಪುರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಶ್ಲಾಘನೆ

# ಸರ್ವ ಸಮುದಾಯದ ಜನರನ್ನು ಸಮಾನವಾಗಿ ಕಂಡ ಯಡಿಯೂರಪ್ಪ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮೇ.09 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮದ ಹಿನ್ನೆಲೆಯಲ್ಲಿ, ವಿಜಯಪುರ ನಗರ ಮಂಡಲದ ವತಿಯಿಂದ ಬುಧವಾರ ಪೂರ್ವಭಾವಿ ಸಭೆ ಜರುಗಿತು.

ಈ ಸಭೆಯಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಕರ್ನಾಟಕ ಕಂಡ ಅತ್ಯಂತ ಧೀಮಂತ ರಾಜಕೀಯ ಮುತ್ಸದ್ದಿಗಳು ಅವರು ಮುಖ್ಯಮಂತ್ರಿಗಳಾಗಿ ಭಾಗ್ಯಲಕ್ಷ್ಮೀ ಯೋಜನೆ, ಶಾಲಾ ಮಕ್ಕಳಿಗೆ ಸೈಕಲ್ , ರೈತರಿಗಾಗಿ ಪ್ರತ್ಯೇಕ ಕೃಷಿ ಬಜೆಟ್ ಹೀಗೆ ಅಭೂತಪೂರ್ವ ಕೊಡುಗೆ ನೀಡಿದ್ದಾರೆ. ವಿಜಯಪುರ ಜಿಲ್ಲೆಗೆ ಅನೇಕ ಕೊಡುಗೆಗಳನ್ನು ಕೊಟ್ಟಿದ್ದು ಯಡಿಯೂರಪ್ಪನವರು ಅಜಾತಶತ್ರುವಾಗಿದ್ದು ಎಲ್ಲ ಸಮುದಾಯದ ಜನರನ್ನು ಸಮಾನರಾಗಿ ಕಂಡವರಾಗಿದ್ದಾರೆ. ಅವರ ಅಭಿಮಾನೋತ್ಸವದ ಈ ಕಾರ್ಯಕ್ರಮಕ್ಕೆ ನಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಕಾರ್ಯಕರ್ತರಿಗೆ ಕರೆ ಕೊಟ್ಟರು ಈ ಸಂದರ್ಭದಲ್ಲಿ ಮುಖಂಡರಾದ ಸುರೇಶ ಬಿರಾದಾರ, ಮಳುಗೌಡ ಪಾಟೀಲ, ಸಂದೀಪ ಪಾಟೀಲ, ಭೀಮಾಶಂಕರ ಹದನೂರ, ಸ್ವಪ್ನಾ ಕಣಮುಚನಾಳ, ಭರತ ಕೋಳಿ, ವಿಜಯ ಜೋಷಿ, ಪಾಪುಸಿಂಗ ರಜಪೂತ, ರಾಜೇಶ ತಾವಸೆ, ಶರಣಬಸಪ್ಪ ಕುಂಬಾರ, ಅಪ್ಪು ಕುಂಬಾರ, ರಾಜು ಬಿರಾದಾರ, ಜಗದೀಶ ಮುಚ್ಚಂಡಿ, ಸಂತೋಷ ಯಂಕಪ್ಪಗೋಳ, ಪ್ರಹ್ಲಾದ ಕಾಂಬಳೆ, ವಿವೇಕ ತಾವರಗೇರಿ, ಶಿವರಾಜ ಮಡಿವಾಳ, ಮಂಥನ ಗಾಯಕವಾಡ, ಭಾರತಿ ಭುಯ್ಯಾರ, ಶಾಂತಾ ಉತ್ಲಾಸಕರ, ಶಾಂತಾ ಯಳಮೇಲಿ, ಶ್ರೀದೇವಿ ಅವಧಿ, ಬಸಮ್ಮಾ ಗುಜರಿ ಹಾಗೂ ಪ್ರಿಯಾಂಕಾ ಶೇರಖಾನೆ ಅವರು ಉಪಸ್ಥಿತರಿದ್ದರು.



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR